# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 87 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 12–10–2023 ಗುರುವಾರ | ಪುಟ: 4 | ಬೆಲೆ : ರೂ.2–00
Volume - 01 Issue - 87 | Title- Code: KARKAN 28269 | Chitradurga | Date: 12-10-2023 Thursday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಪಠ್ಯೇತರ ಚಟುವಟಿಕೆಗಳಲ್ಲೂ ವಿದ್ಯಾರ್ಥಿಗಳು ತೊಡಗಿಕೊಂಡಾಗ ಕ್ರಿಯಾಶೀಲತೆ ಜಾಗೃತ 2

ಕಬೀರಾನಂದಸ್ವಾಮಿ ಆಶ್ರಮದಲ್ಲಿ 15 ರಿಂದ 24ರವರೆಗೆ ಶರನ್ನವರಾತ್ರಿ 3

ಪಿ.ಎಂ. ವಿಶ್ವಕರ್ಮ ಯೋಜನೆ ವಾರದಲ್ಲಿ 10 ಸಾವಿರ ನೋಂದಣಿ ಗುರಿ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ತಾ.ಪಂ ಕೆ.ಡಿ.ಪಿ ಸಭೆ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಮೊದಲನೇ ತ್ರೈಮಾಸಿಕ ಕೆ.ಡಿ.ಪಿ ಸಭೆಯನ್ನು ಇದೇ ಅಕ್ಟೋಬರ್ 18ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ನಿಗಧಿಪಡಿಸಲಾಗಿದೆ. ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಸಭೆಯ ಅಧ್ಯಕ್ಷತೆ ವಹಿಸುವರು ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಹೆಚ್.ಹನುಮಂತಪ್ಪ ತಿಳಿಸಿದ್ದಾರೆ.

### ಪಿ.ಎಂ ಸ್ವ-ನಿಧಿ: ಸಾಲ ಸೌಲಭ್ಯಕ್ಕೆ ಅರ್ಜಿ

» **ಚಿತ್ರದುರ್ಗ**

ಹೊಸದುರ್ಗ ಪುರಸಭೆ ವ್ಯಾಪ್ತಿಯಲ್ಲಿ ಕೇಂದ್ರ ಸರ್ಕಾರದ ಯೋಜನೆ ಪ್ರಧಾನಮಂತ್ರಿ ಬೀದಿ ಬದಿ ವ್ಯಾಪಾರಿಗಳ ಆತ್ಮ ನಿರ್ಭರ್ ನಿಧಿಯ ಕಿರು ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ.ದೋಬಿ, ಇಸ್ತ್ರಿ ಸೇವೆ, ಹಳೆ ಪಾತ್ರೆಗಳ ವ್ಯಾಪಾರ, ಬಡಗಿ, ಬೀದಿರಿನ ಬುಟ್ಟಿ, ಬೊಂಬು, ಏಣಿ ವ್ಯಾಪಾರ, ಹೂವಿನ ಕುಂಡಗಳ ವ್ಯಾಪಾರ, ಆಹಾರ ತಯಾರಿಸಿ ಮಾರಾಟ ಮಾಡುವರು (ಕ್ಯಾಟರಿಂಗ್), ದಿನಪತ್ರಿಕೆ ಹಂಚಿಕೆ ಮತ್ತು ಹಾಲು ಮಾರಾಟ ಮಾಡುವವರು ಪಿಎಂ–ಸ್ವನಿಧಿ ಯೋಜನೆಯಡಿ ದೊರೆಯುವ ಸಾಲ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಆಸಕ್ತರು, ರೇಷನ್ ಕಾರ್ಡ್, ಆಧಾರ ಕಾರ್ಡ್, ಚುನಾವಣಾ ಗುರುತಿನ ಚೀಟಿ, ವೈಯಕ್ತಿಕ ಉಳಿತಾಯದ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ವ್ಯಾಪಾರ ಮಾಡುತ್ತಿರುವ ಸ್ಥಳದ ಫೋಟೋ, ಪಾಸ್ ಫೋಟೋ ಸೈಜ್ ಫೋಟೋ–2, ಜಾತಿ ಮತ್ತು ಆದಾಯ ಪ್ರಮಾಣ ಪತ್ರ ದಾಖಲೆಗಳೊಂದಿಗೆ ಹೊಸದುರ್ಗ ಪುರಸಭಾ ಕಾರ್ಯಾಲಯದ ಡೇ–ನಲ್ಮ್ ಶಾಖೆಯ ವಿಷಯ ನಿರ್ವಾಹಕರನ್ನು ಸಂಪರ್ಕಿಸಬಹುದು ಎಂದು ಹೊಸದುರ್ಗ ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಕ್ಟೋಬರ್ 16 ರಂದು ಬೃಹತ್ ಉದ್ಯೋಗ ಮೇಳ

» **ದಾವಣಗೆರೆ**

ಅಕ್ಟೋಬರ್ 16 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಮುನ್ಸಿಪಲ್ ಗ್ರೌಂಡ್ ಹತ್ತಿರ, ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಈ ಉದ್ಯೋಗ ಮೇಳಕ್ಕೆ ವಿವಿಧ ಜಿಲ್ಲೆ ಹಾಗೂ ರಾಜ್ಯಮಟ್ಟದಿಂದ 100–150 ಉದ್ಯೋಗದಾತರನ್ನು(Employers/companies/Industries) ಭಾಗವಹಿಸಲಿದ್ದು, ಜಿಲ್ಲೆಯ ನಿರುದ್ಯೋಗಿ ಯುವಕ/ಯುವತಿಯರು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದೆಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್.ಎಂ.ವಿ ತಿಳಿಸಿದ್ದಾರೆ

ನಾಯಕ ಸಮಾಜದ ತಾಲೂಕು ಅಧ್ಯಕ್ಷ ಬಿ.ಕಾಂತರಾಜ್ ಕರೆ

# ನಾಡದೊರೆ ಮದಕರಿ ಉತ್ಸವಕ್ಕೆ ಬನ್ನಿ

» **ಚಿತ್ರದುರ್ಗ**



ನಾಡದೊರೆ ರಾಜವೀರ ಮದಕರಿನಾಯಕ ಜಯಂತ್ಯೋತ್ಸವವನ್ನು ಶುಕ್ರವಾರ ಹಮ್ಮಿಕೊಂಡಿದ್ದು ನಮ್ಮ ಸಮಾಜದ ಬಂಧುಗಳು ಸೇರಿ ಎಲ್ಲಾ ಸಮಾಜದ ಬಂಧುಗಳು ಆಗಮಿಸುವ ಮೂಲಕ ಯಶಸ್ವಿಗೊಳಿಸಿ ಎಂದು ನಾಯಕ ಸಮಾಜದ ತಾಲೂಕು ಅಧ್ಯಕ್ಷ ಬಿ.ಕಾಂತರಾಜ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮದಕರಿ ನಾಯಕ ಜಯಂತ್ಯೋತ್ಸವ ಅಂಗವಾಗಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದರು.

ಚಿತ್ರದುರ್ಗ ಆಳ್ವಿಕೆ ಮೂಲಕ ಸಮಾಜದ ಸುಧಾರಣೆ ಮೂಲಕ ಎಲ್ಲಾ ಸಮಾಜದ. ಹಿತ ಕಾಯುವ ಕೆಲಸ ಮದಕರಿನಾಯಕರು ಮಾಡಿದ್ದಾರೆ. ನಮ್ಮ ನಾಡದೊರೆ ರಾಜವೀರ ಮದಕರಿನಾಯಕ ಮದಕರಿ ಉತ್ಸವವನ್ನು ಇದೇ ಅಕ್ಟೋಬರ್ 13 ರಂದು ಶುಕ್ರವಾರ ಕನಕ ವೃತ್ತದಿಂದ 3 ಗಂಟೆಗೆ ಅದ್ದೂರಿಯಾಗಿ ಮೆರವಣಿಗೆ ಹಮ್ಮಿಕೊಳ್ಳಲಾಗಿದ್ದು ಜಿಲ್ಲೆಯ ಮತ್ತು ನಾಡಿನ ಎಲ್ಲಾ ಸಮಾಜದ ಬಂಧುಗಳು ಭಾಗವಹಿಸಲು ಮನವಿ ಮಾಡುತ್ತೇನೆ. ಮದಕರಿ ನಾಯಕರು ನಾಯಕ ಸಮಾಜಕ್ಕೆ ಮಾತ್ರ ಸೀಮಿತವಲ್ಲ ಎಲ್ಲಾ ಸಮಾಜದವರು ಸಹ ಮೆರವಣಿಗೆಯಲ್ಲಿ ಭಾಗವಹಿಸಿ ಎಂದರು. ಎಲ್ಲಾ ಸಮಾಜದವರಿಗೆ ಮಾಧ್ಯಮದ ಮೂಲಕ ಭಾಗವಹಿಸಲು ಕರೆ ನೀಡಿದ್ದು ಮುಖಂಡರು ಅಷ್ಟೇ ಅಲ್ಲದೇ ಆ ಸಮಾಜದ ಬಾಂಧವರನ್ನು ಕರೆ ತಂದು ಯಶಸ್ವಿಗೊಳಿಸಿದರೆ ಮದಕರಿನಾಯಕರ ಮೇಲಿನ ಅಭಿಮಾನ ಹಿಮ್ಮಡಿಗೊಳ್ಳತ್ತದೆ.

ನಮ್ಮನ್ನ ಕರೆಯಬೇಕಿತ್ತು ಎಂದು ಕೆಲವರು ಮಾಧ್ಯಮದರ ಮುಂದೆ ತಿಳಿಸಿದ್ದಾರೆ ಎಂದು ತಿಳಿದಿದ್ದು ಮದಕರಿನಾಯಕರು ಜಯಂತಿಗೆ ಎಲ್ಲಾರಿಗೂ ಆಹ್ವಾನವಿದೆ.ಈ ಮೊದಲು ಮಾಡಿದ ಸುದ್ದಿಗೋಷ್ಠಿಯಲ್ಲಿ ನಾನು ತಿಳಿಸಿದ್ದೆ ಎಲ್ಲಾ ಸಮಾಜಕ್ಕೂ ಮದಕರಿನಾಯಕ ಕೊಡುಗೆ ಇದೆ ಎಲ್ಲಾರೂ ಭಾಗವಹಿಸಿ ಎಂದು ಮನವಿ ಮಾಡಿದ್ದೆ ಈಗ ನಮ್ಮನ್ನ ಕರೆದಿಲ್ಲ ಎಂಬುದು ಸರಿಯಲ್ಲ. ಇದು ನಮ್ಮ ಮನೆ ಕಾರ್ಯಕ್ರಮವಲ್ಲ ಎಂದು ಮುಖಂಡರಿಗೆ ಟಾಂಗ್ ನೀಡಿದರು. ರಾಜವೀರ ಮದಕರಿನಾಯಕರನ್ನು ವರ್ಷದಲ್ಲಿ ಮೂರು ಬಾರಿ ಕಾರ್ಯಕ್ರಮವನ್ನು ಮಾಡಲಾಗುತ್ತದೆ. ಪಟ್ಟಕ್ಕೆ ಹೇರಿದ ದಿನ, ಮದಕರಿನಾಯಕ ಸ್ಮರಣೋತ್ಸವ, ಮದಕರಿ ಉತ್ಸವ ಎಂಬ ಹೆಸರಿನಲ್ಲಿ ಪ್ರತಿ ವರ್ಷ ಕಾರ್ಯಕ್ರಮ ಮಾಡಲಾಗುತ್ತದೆ ಎಂದರು. ಮೆರವಣಿಗೆಯನ್ನು ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಉದ್ಘಾಟನೆ ಮಾಡುವರು, ಶಾಸಕರಾದ ಟಿ.ರಘುಮೂರ್ತಿ, ಗೋಪಾಲಕೃಷ್ಣ, ಗೋವಿಂದಪ್ಪ, ಕೆ.ಸಿ.ವೀರೇಂದ್ರ ಪಪ್ಪಿ, ಚಂದ್ರಪ್ಪ, ಕೇಂದ್ರ ಸಚಿವರಾದ ನಾರಾಯಣಸ್ವಾಮಿ ಭಾಗವಹಿಸುವರು.

ಮದಕರಿನಾಯಕ ಪ್ರತಿಮೆಯನ್ನು ಹೂ ಮತ್ತು ಲೈಟ್ ಗಳ ಮೂಲಕ ವಿಶೇಷವಾಗಿ ಅಲಂಕಾರ ಮಾಡಲಾಗಿರುತ್ತದೆ. ಎಲ್ಲಾ ಪುತ್ಥಳಿಗಳನ್ನು ಸಹ ಅಲಂಕಾರ ಮಾಡಲಾಗಿರುತ್ತದೆ.ಯುವ ಸಮೂಹಕ್ಕೆ ತಕ್ಕಂತೆ ಮೆರವಣಿಗೆ ಮಾಡಲಾಗುತ್ತಿದ್ದು ನಿಮ್ಮ ಮನೆ ಕಾರ್ಯಕ್ರಮದಂತೆ ಭಾಗವಹಿಸೋಣ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ನೂತನ ಮದಕರಿ ನಾಯಕರ ಭಾವಚಿತ್ರ ಬಿಡುಗಡೆಗೊಳಿಸಿದರು. ನಾಯಕ ಸಮಾಜದ ಜಿಲ್ಲಾ ಅಧ್ಯಕ್ಷ ಹೆಚ್.ಜೆ. ಕೃಷ್ಣಮೂರ್ತಿ,ಗೋಪಾಲಸ್ವಾಮಿ ನಾಯಕ್, ಕಾಟೀಹಳ್ಳಿ ಕರಿಯಪ್ಪ, ಸೋಮೇಂದ್ರ, ಕೇಶವಮೂರ್ತಿ ಇದ್ದರು.

# ಮದಕರಿ ಜಯಂತಿಗೆ ಎಲ್ಲರನ್ನೂ ಪರಿಗಣಿಸಿ

» **ಚಿತ್ರದುರ್ಗ**



ಅ. 13 ರಂದು ನಡೆಯಲಿರುವ ಮದಕರಿ ನಾಯಕರ ಜಯಂತೋತ್ಸವ ಕಾರ್ಯಕ್ರಮದಲ್ಲಿ ಎಲ್ಲಾ ಸಮಾಜದವರನ್ನು ಪರಿಗಣನೆಗೆ ತೆಗೆದುಕೊಂಡು ಆಚರಣೆಯನ್ನು ಮಾಡುವಂತೆ ನಗರಸಭೆಯ ಮಾಜಿ ಅಧ್ಯಕ್ಷ ಸಿ.ಟಿ.ಕೃಷ್ಣಮೂರ್ತಿ ಸಮಾಜದ ಮುಖಂಡರನ್ನು ಆಗ್ರಹಿಸಿದ್ದಾರೆ.

ಚಿತ್ರದುರ್ಗ ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಚಿತ್ರದುರ್ಗವನ್ನಾಳಿದವರಲ್ಲಿ ಮದಕರಿ ನಾಯಕರು ಪ್ರಮುಖರಾಗಿದ್ದಾರೆ. ಇಂತಹ ಜನ್ಮ ದಿನೋತ್ಸವವನ್ನು ಕಾಂತರಾಜ್ ಬಳದವರು ಆಚರಣೆ ಮಾಡುತ್ತಿರುವುದು ಶ್ಲಾಘನೀಯವಾದದು, ನಾನು 1988 ರಿಂದಲೂ ಕೋಟೆಯ ಸಂಪರ್ಕದಲ್ಲಿದ್ದೆನೆ, ಮದಕರಿನಾಯಕರು ಚಿತ್ರದುರ್ಗಕ್ಕೆ ಉತ್ತಮವಾದ ಕಾರ್ಯವನ್ನು ಮಾಡಿದ್ದಾರೆ. ಮಠವನ್ನು ಕಟ್ಟಿಸಿದ್ದಾರೆ. ಕೆರಯನ್ನು ನಿರ್ಮಾಣ ಮಾಡಿದ್ದಾರೆ. ಏಕನಾಥೇಶ್ವರಿ ಅಮ್ಮನವರ ದೇವಾಲಯವನ್ನು ಸಹಾ ನಿರ್ಮಾಣ ಮಾಡುವಲ್ಲಿ ಪ್ರಮುಖ ಪಾತ್ರವನ್ನು ವಹಿಸಿದ್ದರು ಚಿತ್ರದುರ್ಗವನ್ನು ಸುಮಾರು 211 ವರ್ಷ ವಿವಿಧ ರಾಜರು ಸಾಮಂತರು ಆಳ್ವಿಕೆಯನ್ನು ನಡೆಸಿದ್ದಾರೆ ಎಂದರು.

ಮದಕರಿನಾಯಕರು ಯುದ್ದ ಪ್ರಿಯರಾಗಿದ್ದರು. ತಮ್ಮ ಆಡಳಿತದ ಸಮಯದಲ್ಲಿ ರಾಜ್ಯವನ್ನು ವಿಸ್ತರಣೆ ಮಾಡಿದ್ದರು, ಮದಕರಿನಾಯಕರು ಯಾವ ಜನಾಂಗಕ್ಕೂ ಸಹಾ ಸೇರಿದವರಲ್ಲ ಎಲ್ಲಾ ಜನಾಂಗದವರನ್ನು ಸ್ನೇಹದಿಂದ ನೋಡುವುದರ ಮೂಲಕ ಆಡಳಿತವನ್ನು ನಡೆಸುತ್ತಿದ್ದರು. ಅವರ ಜಯಂತಿಯನ್ನು ಎಲ್ಲರು ಸೇರಿ ಆಚರಣೆ ಮಾಡಬೇಕಿದೆ. ಎಲ್ಲರನ್ನು ಒಟ್ಟಿಏಗ ತೆಗೆದುಕೊಂಡು ಈ ಜಯಂತಿಯನ್ನು ಆಚರಣೆ ಮಾಡಬೇಕಿದೆ ಎಂದು ಕೃಷ್ಣಮೂರ್ತಿ ತಿಳಿಸಿದರು.

ನಗರಸಭೆಯ ಮಾಜಿ ಅಧ್ಯಕ್ಷರಾದ ನಿರಂಜನ ಮೂರ್ತಿ ಮಾತನಾಡಿ, ಚಿತ್ರದುರ್ಗವನ್ನು ಆಳ್ವಿಕೆ ನಡೆಸಿದವರಲ್ಲಿ ಮದಕರಿ ನಾಯಕರಷ್ಠೇ ಪ್ರಮುಖರಾದವರು ಬಿಚ್ಚುಗತ್ತಿ ಭರವಣ್ಣ ನಾಯಕ ಸಹಾ ಚಿತ್ರದುರ್ಗದಲ್ಲಿ ಇವರ ಪ್ರತಿಮೆ ಎಲ್ಲಿಯೂ ಸಹಾ ಇಲ್ಲ ಇವರ ಪ್ರತಿಮೆಯನ್ನು ಚಿತ್ರದುರ್ಗದಲ್ಲಿ ಸ್ಥಾಪನೆ ಮಾಡಬೇಕೆಂದು ಆಗ್ರಹಿಸಿದರು.

ಗೋಷ್ಟಿಯಲ್ಲಿ ನಗರಸಭೆ ಮಾಜಿ ಅಧ್ಯಕ್ಷರಾದ ಮಂಜಪ್ಪ, ಮಾಜಿ ಸದಸ್ಯರಾದ ಗಾಡಿ ಮಂಜಣ್ಣ, ಮಾಜಿ ಉಪಾಧ್ಯಕ್ಷರಾದ ದುರುಗೇಶಪ್ಪ, ಜಯ್ಯಣ್ಣ ,ಆನಂದ್, ಮಹಾಂತೇಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಎಡಿಜಿಪಿ ಭೇಟಿ ಜನಸ್ನೇಹಿ ಪೊಲೀಸ್ ಆಗಿ ಕಾರ್ಯನಿರ್ವಹಿಸಿ



» **ಚಿತ್ರದುರ್ಗ**

ಸಾರ್ವಜನಿಕರ ದೂರುಗಳಿಗೆ ಸ್ಪಂದಿಸುವ ಮೂಲಕ ಜನಸ್ನೇಹಿ ಪೋಲಿಸ್ ಆಗಿ ಕಾರ್ಯನಿರ್ವಹಿಸಬೇಕು ಎಂದು ಎಡಿಜಿಪಿ ಎಸ್. ಮುರುಗನ್ ಪೋಲಿಸರಿಗೆ ಸೂಚನೆ ನೀಡಿದರು. ನಗರದ ಜಿಲ್ಲಾ ಪೊಲೀಸ್ ಕಚೇರಿಗೆ ಹಾಗೂ ಜಿಲ್ಲಾ ಸಶಸ್ತ್ರ ಮೀಸಲು ಪಡೆ ವಿಭಾಗಕ್ಕೆ ಬುಧವಾರ ಭೇಟಿ ನೀಡಿ ಪರಿಶೀಲನೆ ನಡೆಸಿದ ಅವರು, ಜಿಲ್ಲೆಯ ಎಲ್ಲ ಪೋಲಿಸ್ ಠಾಣೆ ಹಾಗೂ ಕಚೇರಿಗಳಲ್ಲಿ ಸ್ವಚ್ಚತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಪುಟ ↘ 3

## ಪ್ರಮುಖ ಸುದ್ದಿ

ಪೂರ್ವಭಾವಿ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಮಹರ್ಷಿ ವಾಲ್ಮೀಕಿ ಜಯಂತಿ: ಅರ್ಥಪೂರ್ಣ ಆಚರಣೆ



» **ಚಿತ್ರದುರ್ಗ**

ಜಗತ್ತಿಗೆ ಸನ್ಮಾರ್ಗ ತೋರಿದ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಇದೇ ಅಕ್ಟೋಬರ್ 28 ರಂದು ಜಿಲ್ಲಾ ಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದ್ದು, ಈ ನಿಟ್ಟಿನಲ್ಲಿ ಅಗತ್ಯ ಪೂರ್ವಸಿದ್ಧತೆ ಕೈಗೊಳ್ಳುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಅಧಿಕಾರಿಗಳಿಗೆ ಸೂಚನೆ ನೀಡಿದರು.ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಮಹರ್ಷಿ ವಾಲ್ಮೀಕಿ ಜಯಂತಿ ಆಚರಣೆ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಜಯಂತಿ ಅಂಗವಾಗಿ ಅಕ್ಟೋಬರ್ 28 ರಂದು ಬೆಳಿಗ್ಗೆ 10ಕ್ಕೆ ಐತಿಹಾಸಿಕ ಕೋಟೆ ಮುಂಭಾಗದಿಂದ ಮಹರ್ಷಿ ವಾಲ್ಮೀಕಿ ಭಾವಚಿತ್ರದ ಮೆರವಣಿಗೆ ಪ್ರಾರಂಭವಾಗಿ ಆನೆಬಾಗಿಲು ಮೂಲಕ, ಗಾಂಧಿವೃತ್ತ, ಮದಕರಿ ನಾಯಕ ವೃತ್ತದ ಮೂಲಕ ತರಾಸು ರಂಗಮಂದಿರ ತಲುಪಲಿದೆ. ಮಧ್ಯಾಹ್ನ 12 ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಮೆರವಣಿಗೆಯಲ್ಲಿ ಡೊಳ್ಳು, ವೀರಗಾಸೆ, ಖಾಸಬೇಡರ ಪಡೆ ಸೇರಿದಂತೆ ವಿವಿಧ ಕಲಾತಂಡಗಳು ಭಾಗವಹಿಸಲಿದ್ದಾರೆ.

ಪುಟ ↘ 3




## ಫಾಸ್ಟ್ ನ್ಯೂಸ್

### ರಾಜ್ಯಮಟ್ಟದ ಚದುರಂಗ ಸ್ಪರ್ಧೆ: ದೀಕ್ಷಿತ್ ಆಯ್ಕೆ

» ದಾವಣಗೆರೆ

ನಗರದ ಶ್ರೀಸೋಮೇಶ್ವರ ವಿದ್ಯಾಲಯದ ವಿದ್ಯಾರ್ಥಿ ದೀಕ್ಷಿತ್ ಕ್ರೀಡಾಕೂಟದಲ್ಲಿ ಮತ್ತೊಂದು ಸಾಧನೆ ಮಾಡಿದ್ದಾರೆ. ನಗರದ ಗುರುಭವನದಲ್ಲಿ ಶಾಲಾ ಶಿಕ್ಷಣ ಇಲಾಖೆವತಿಯಿಂದ ನಡೆದ ಜಿಲ್ಲಾಮಟ್ಟದ 17 ವರ್ಷದ ಬಾಲಕರ ವಿಭಾಗದ ಚದುರಂಗ



ಸ್ಪರ್ಧೆಯಲ್ಲಿ ದೀಕ್ಷಿತ್ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಗೊಂಡಿದ್ದಾರೆ. 9ನೇ ತರಗತಿ ವಿದ್ಯಾಭ್ಯಾಸ ಮಾಡುತ್ತಿರುವ ದೀಕ್ಷಿತ್ ಜಿಲ್ಲಾಮಟ್ಟದ ಚದುರಂಗ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಪಡೆಯುವ ಮೂಲಕ ಶಾಲೆಗೆ ಹಾಗೂ ಪೋಷಕರಿಗೆ ಕೀರ್ತಿ ತಂದು, ಎಲ್ಲರ ಪ್ರೀತಿಗೆ ಪಾತ್ರರಾಗಿದ್ದಾರೆ. ಬೆಂಗಳೂರಿನಲ್ಲಿ ನಡೆಯುತ್ತಿರುವ ರಾಜ್ಯಮಟ್ಟದ ಚೆಸ್ ಸ್ಪರ್ಧೆಗೆ ತೆರಳಿರುವ ದೀಕ್ಷಿತ್ ಅಲ್ಲಿಯೂ ಸಹ ವಿಜೇತರಾಗಿ ಬರುವಂತೆ ಆಡಳಿತ ಮಂಡಳಿ, ಶಾಲಾ ಸಿಬ್ಬಂದಿ ವರ್ಗ ಮತ್ತು ಪೋಷಕರು ಶುಭಕೋರಿದ್ದಾರೆ.

### ವ್ಯವಸಾಯ ಸೇವಾ ಸಹಕಾರಿ ಸಂಘದ ಅಧ್ಯಕ್ಷರಾಗಿ ಬೊಮ್ಮಣ್ಣ

» ಹೊಸದುರ್ಗ

ಪಟ್ಟಣದ ವ್ಯವಸಾಯ ಸೇವಾ ಸಹಕಾರಿ ಸಂಘದ ಅಧ್ಯಕ್ಷರಾಗಿ ವಕೀಲ ಎ.ಎಲ್



ಬೊಮ್ಮಣ್ಣ ಅವಿರೋಧವಾಗಿ ಸೋಮವಾರ ಆಯ್ಕೆಯಾಗಿದ್ದಾರೆ ಎಂದು ಸಹಕಾರಿ ಸಂಘದ ಕಾರ್ಯನಿರ್ವಾಹಕ ಅಧಿಕಾರಿ ದೇವರಾಜ್ ತಿಳಿಸಿದರು. ಈ ಸಂಧರ್ಬದಲ್ಲಿ ಶಾಸಕ ಬಿ.ಜಿ ಗೋವಿಂದಪ್ಪ, ಮುಖಂಡರುಗಳಾದ ಕಾರೇಹಳ್ಳಿ ಬಸವರಾಜ್, ಎಂ. ಪಿ. ಶಂಕರ್, ಮಹಮ್ಮದ್ ಇಸ್ಮಾಯಿಲ್ ಸಂಘದ ನಿರ್ದೇಶಕರುಗಳು, ಪದಾಧಿಕಾರಿಗಳು ಸೇರಿದಂತೆ ಹಲವರಿದ್ದರು.

### ವಿಶ್ವಕರ್ಮ ಅಭಿವೃದ್ಧಿ ನಿಗಮದಿಂದ ಅರ್ಜಿ

» ಚಿತ್ರದುರ್ಗ

ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2023-24ನೇ ಸಾಲಿಗೆ ಸಮುದಾಯಗಳ ಅಭಿವೃದ್ಧಿಗಾಗಿ ವಿವಿಧ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಪಂಚವೃತ್ತಿ ಅಭಿವೃದ್ಧಿಗಾಗಿ ಆರ್ಥಿಕ ನೆರವು, ಸ್ವಯಂ ಉದ್ಯೋಗ ವೈಯಕ್ತಿಕ ಸಾಲ, ಅರಿವು-ಶೈಕ್ಷಣಿಕ ಸಾಲ, 2 ಎಕರೆ ಜಮೀನು ಹೊಂದಿದವರಿಗೆ ಗಂಗಾ ಕಲ್ಯಾಣ ನೀರಾವರಿ, 8 ಲಕ್ಷ ಆದಾಯ ಮಿತಿ ಹೊಂದಿದವರಿಗೆ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಸ್ವಾವಲಂಬಿ ಸಾರಥಿ, ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗಕ್ಕಾಗಿ ಸಾಲ ಮಂಜೂರು ಮಾಡಲಾಗವುದು. ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆಗಳಿಗೆ ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‍ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 31 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.
ರಾಜ್ಯದ ಖಾಯಂ ನಿವಾಸಿಗಳಾದ, ವಿಶ್ವಕರ್ಮ ಹಾಗೂ ಅದರ ಉಪ ಸಮುದಾಯಗಳಿಗೆ ಸೇರಿದ ಜಾತಿ ಆದಾಯ ಪ್ರಮಾಣ ಪತ್ರ ಹೊಂದಿದ, 18 ರಿಂದ 55 ವರ್ಷಗಳ ಮಿತಿಯಲ್ಲಿರುವ, ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಕುಟುಂಬದ ಒಬ್ಬರಿಗೆ ಮಾತ್ರ ಸಾಲ ಸೌಲಭ್ಯ ಒದಗಿಸಲಾಗುವುದು, ಶೈಕ್ಷಣಿಕ ಹಾಗೂ ಸ್ವಾವಲಂಬಿ ಸಾರಥಿ ಯೋಜನೆಯಡಿ ಸಾಲ ಪಡೆಯುವ ಅಭ್ಯರ್ಥಿಗಳ ವಯೋಮಿತಿ 18 ರಿಂದ 30 ವರ್ಷಗಳು ಇರಬೇಕು. ಶೈಕ್ಷಣಿಕ ಸಾಲ ಮಂಜೂರಾತಿ ವಾರ್ಷಿಕ ರೂ.3.5 ಲಕ್ಷ, ಇತರೆ ಯೋಜನೆಗಳಿಗೆ ಗ್ರಾಮಾಂತರ ಪ್ರದೇಶದಲ್ಲಿ ವಾರ್ಷಿಕ ರೂ.98 ಸಾವಿರ ಹಾಗೂ ನಗರ ಪ್ರದೇಶದಲ್ಲಿ ವಾರ್ಷಿಕ ರೂ.1.20 ಲಕ್ಷ ಆದಾಯ ಮಿತಿ ನಿಗದಿಪಡಿಸಲಾಗಿದೆ. ಯೋಜನೆಗಳ ಫಲಾನುಭವಿಗಳ ಆಯ್ಕೆಯಲ್ಲಿ ನಿಯಮಾನುಸಾರ ಮಹಿಳೆಯರಿಗೆ ಶೇ.33 ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1% ರಷ್ಟು ಮೀಸಲಾತಿಯನ್ನು ನೀಡಲಾಗುವುದು.
ಯೋಜನೆಗಳ ಸೌಲಭ್ಯ ಪಡೆಯಲು ಇಚ್ಛಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾ ಸಿಂಧು ಪೋರ್ಟಲ್ ್ಞಣಣಠಿ://ಜಿತಛಿಟಿಜ್ಞುಣ.ಇಚಿಡಿಟಿಚಿಣಚಿಞಚಿ.ರಿಠಿತಿ.ಟಿ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‍ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‍ಸೈಟ್ www.kvcdcl.karnataka.gov.in ಅಥವಾ ದೂ.080-22374848, 7899899039 ಸಂಪರ್ಕಿಸಬಹುದು.

### ಮದ್ಯ ಮಾರಾಟ ನಿಷೇಧ

» ದಾವಣಗೆರೆ

ನಗರದ ಹಿಂದೂ ಮಹಾಗಣಪತಿ ವಿಸರ್ಜನೆ ಮೆರವಣಿಗೆ ವೇಳೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಅಕ್ಟೋಬರ್.14 ರಂದು ಬೆಳಗ್ಗೆ 6 ರಿಂದ ಮಧ್ಯ ರಾತ್ರಿ 12 ಗಂಟೆಯವರೆಗೆ ಮದ್ಯ ಮಾರಾಟ ಮತ್ತು ಸರಬರಾಜನ್ನು ನಿಷೇಧಿಸಲಾಗಿದೆ.

# ಪಠ್ಯೇತರ ಚಟುವಟಿಕೆಗಳಲ್ಲೂ ವಿದ್ಯಾರ್ಥಿಗಳು ತೊಡಗಿಕೊಂಡಾಗ ಕ್ರಿಯಾಶೀಲತೆ ಜಾಗೃತ

» ಚಳ್ಳಕೆರೆ

ವಿದ್ಯಾರ್ಥಿಗಳಲ್ಲಿ ಕ್ರಿಯಾಶೀಲತೆಯನ್ನು ಹೆಚ್ಚಿಸಲು ಹಲವಾರು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಬೇಕಿದೆ. ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಲ್ಲೂ ಸಹ ನಿರಂತರವಾಗಿ ಭಾಗವಹಿಸಬೇಕು. ರಾಷ್ಟ್ರೀಯ ಯೋಜನಾ ಶಿಬಿರ ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವನೆಯನ್ನು ಹೆಚ್ಚಿಸಲು ಸಹಕಾರಿ ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ನಗರದ ಎಚ್‍ಪಿಪಿಸಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಎನ್‍ಎಸ್‍ಎಸ್ ಘಟಕ 1 ಮತ್ತು 2, ಎನ್‍ಸಿಸಿ, ಯೂತ್ ರೆಡ್‍ಕ್ರಾಸ್, ರೋವರ್ಸ್ ಮತ್ತು ರೇಂಜರ್ಸ್ ಘಟಕ ಉದ್ಘಾಟನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ತಾಲ್ಲೂಕಿನಾದ್ಯಂತ ಅತಿಹೆಚ್ಚು ವಿದ್ಯಾರ್ಥಿಗಳು ದಾಖಲಾಗಿರುವ ಈ ಕಾಲೇಜು ಇನ್ನೂ ಹೆಚ್ಚಿನ ಚಟುವಟಿಕೆಗಳನ್ನು ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳ



ಕ್ರಿಯಾಶೀಲತೆಯನ್ನು ಹೆಚ್ಚಿಸಬೇಕು. ವಿದ್ಯಾರ್ಥಿಗಳು ಸಹ ಇಂತಹ ಸೇವಾ ಯೋಜನಾ ಘಟಕಗಳಲ್ಲಿ ಪಾಲ್ಗೊಂಡು ಉತ್ತಮ ಕಾರ್ಯಗಳ ಮೂಲಕ ಹೆಸರುಪಡೆಯಬೇಕು. ಶೈಕ್ಷಣಿಕ ಪ್ರಗತಿಗೆ ಇಂತಹ ಚಟುವಟಿಕೆಗಳು ಪ್ರೇರಣೆಯಾಗುತ್ತವೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ.ಆರ್. ರಂಗಪ್ಪ ಮಾತನಾಡಿ, ಕಾಲೇಜಿನ ಅಭಿವೃದ್ಧಿಪರ ಚಿಂತನೆಗಳಿಗೆ ಶಾಸಕ ಟಿ.ರಘುಮೂರ್ತಿಯವರೇ ಪ್ರೇರಣಾ ಶಕ್ತಿಯಾಗಿದ್ದಾರೆ. ವಿದ್ಯಾರ್ಥಿಗಳ ಹಿತದೃಷ್ಠಿಯಿಂದ ಹಲವಾರು ಸೌಲಭ್ಯ ಕಲ್ಪಿಸಿದ್ದಾರೆ. ಕಾಲೇಜಿನ ಫಲಿತಾಂಶದ ಬಗ್ಗೆ ಶಾಸಕರಿಗೆ ಇನ್ನೂ ಹೆಚ್ಚು ತೃಪ್ತಿ ಸಿಕ್ಕಿಲ್ಲ. ಆದ್ದರಿಂದ ಈ ಬಾರಿ ಎಲ್ಲಾ ವಿದ್ಯಾರ್ಥಿಗಳು ಹೆಚ್ಚು ಪರಿಶ್ರಮದಿಂದ ಅಭ್ಯಾಸ ಮಾಡಿ ಉತ್ತಮ ಫಲಿತಾಂಶ ಪಡೆದು ಕಾಲೇಜಿಗೆ ಕೀರ್ತಿ ತರುವಂತೆ ಮನವಿ ಮಾಡಿದರು.

ಪ್ರಾಧ್ಯಾಪಕರಾದ ಡಾ.ಕೆ.ಚಿತ್ತಯ್ಯ, ಹನುಮಂತರಾಯ, ಜಗನ್ನಾಥ, ರಘುನಾಥ, ಎಚ್.ತಿಪ್ಪೇಸ್ವಾಮಿ, ವಿಜಯಕುಮಾರ್, ಕೃಷ್ಣೇಗೌಡ, ಜಮುನಾರಾಣಿ, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಎಂ.ಜೆ.ರಾಘವೇಂದ್ರ ಹಾಗೂ ಇನ್ನಿತರರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

# ಮೈಲನಹಳ್ಳಿ ವಿದ್ಯುತ್ ಸರಬರಾಜಿಗೆ ಕತ್ತರಿ: ನೊಂದ ರೈತರಿಂದ ಪ್ರತಿಭಟನೆ



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಮೈಲನಹಳ್ಳಿ ಬೆಸ್ಕಾಂ ವಿತರಣಾ ಕೇಂದ್ರದಿಂದ ಪ್ರತಿನಿತ್ಯ ಏಳು ಗಂಟೆಗಳಕಾಲವಿದ್ಯುತ್‍ಸರಬರಾಜುನೀಡುತ್ತಿದ್ದು, ಇದರಿಂದ ಆ ಭಾಗದ ನೀರಾವರಿ ಪ್ರದೇಶದ ಜಮೀನುಗಳಿಗೆ ಹೆಚ್ಚು ಉಪಯುಕ್ತವಾಗುತ್ತಿತ್ತು. ಆದರೆ, ಯಾವುದೇ ಸೂಚನೆ ನೀಡದೆ ಏಕಾಏಕಿ ಕೇವಲ ನಾಲ್ಕು ಗಂಟೆಗಳ ಕಾಲ ಮಾತ್ರ ವಿದ್ಯುತ್ ಸರಬರಾಜು ಮಾಡುತ್ತಿದ್ದನ್ನು ವಿರೋಧಿಸಿ ಗ್ರಾಮದ ರೈತರು ಬೆಸ್ಕಾಂ ಕಚೇರಿ ಮುಂದೆ ಪ್ರತಿಭಟನೆ ನಡೆಸಿದರು.

ಪ್ರತಿಭಟನಾ ನಿರತ ರೈತರಾದ ಸಣ್ಣೀರಣ್ಣ, ರಾಮಣ್ಣ, ನಾಗರಾಜು, ಮಾದಪ್ಪ, ಈರಣ್ಣ, ಮಂಜಣ್ಣ, ನಾಗಣ್ಣ, ದೊಡ್ಡಪಾಲಯ್ಯ, ಭದ್ರಿ, ಬೂದಿಹಳ್ಳಿರಾಜು ಮುಂತಾದವರು ಮಾಹಿತಿ ನೀಡಿ, ಈ ಹಿಂದೆ ಪ್ರತಿನಿತ್ಯ ಏಳು ಗಂಟೆಗಳ ಕಾಲ ವಿದ್ಯುತ್ ಸರಬರಾಜಾಗುತ್ತಿದ್ದು, ಇದನ್ನು ನಂಬಿದ ಸಾವಿರಾರು ರೈತರು ತಮ್ಮ ಜಮೀನಿನಲ್ಲಿ ಬೆಳೆ ಬಿತ್ತಿದ್ದಾರೆ.

ಬೆಳೆ ಕೈಗೆ ಬರುವ ಸಂದರ್ಭದಲ್ಲಿ ಬೆಸ್ಕಾಂ ಯಾವುದೇ ಸೂಚನೆನೀಡದೆ ಕೇವಲ ನಾಲ್ಕು ಗಂಟೆಗಳ ಕಾಲ ಮಾತ್ರ ವಿದ್ಯುತ್ ಸರಬರಾಜು ಮಾಡಲು ಮುಂದಾಗಿದೆ. ಈ ಭಾಗದಲ್ಲಿರುವ ಲಕ್ಷಾಂತರ ಮೌಲ್ಯದ ಬೆಳೆ ಸಂಪೂರ್ಣವಾಗಿ ಆಳಾಗಲಿದ್ದು, ರೈತರು ಸಹ ಸಂಕಷ್ಟಕ್ಕೆ ಈಡಾಗುತ್ತಾರೆ. ಆದ್ದರಿಂದ ಪ್ರತಿನಿತ್ಯ ಏಳು ಗಂಟೆಗಳ ಕಾಲ ವಿದ್ಯುತ್ ನೀಡಬೇಕು ಇಲ್ಲವಾದರೆ ಶುಕ್ರವಾರ ಬೆಸ್ಕಾಂ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸುವುದಾಗಿ ತಿಳಿಸಿದರು.

ಸ್ಥಳಕ್ಕೆ ಭೇಟಿ ನೀಡಿ ಬೆಸ್ಕಾಂ ಜೆಇ ಸಂತೋಷ್‍ಕುಮಾರ್, ಈ ಭಾಗದ ರೈತರಿಗೆ ಪ್ರತಿನಿತ್ಯ ಏಳು ಗಂಟೆಗಳ ಕಾಲ ಹಿಂದಿನಂತೆಯೇ ವಿದ್ಯುತ್ ಸರಬರಾಜು ಮಾಡಲು ತಾವು ಒತ್ತಾಯಿಸುತ್ತಿದ್ದು, ತಮ್ಮ ಮನವಿಯನ್ನು ಹಿರಿಯ ಅಧಿಕಾರಿಗಳಿಗೆ ಇಂದೆ ಕಳಿಸಿಕೊಟ್ಟು ಅವರಿಂದ ಆದೇಶ ಬಂದಕೂಡಲೇ ವಿದ್ಯುತ್ ಸರಬರಾಜು ಮಾಡುವ ಭರವಸೆ ನೀಡಿದ್ದಾರೆ. ವಿದ್ಯುತ್ ಸರಬರಾಜಿನಲ್ಲಿ ಆಗುತ್ತಿರುವ ಸಮಸ್ಯೆಗಳಿಗೆ ಬೆಸ್ಕಾಂ ಹಿರಿಯ ಅಧಿಕಾರಿಗಳು ಪರಿಹಾರ ನೀಡಬೇಕಿದೆ. ಆದ್ದರಿಂದ ರೈತರು ಸಹಕರಿಸಬೇಕೆಂದು ಮನವಿ ಮಾಡಿದರು.

# ಕಪ್ಪುತಲೆ ಹುಳುವಿನ ಭಾದೆಯಿಂದ 41 ಸಾವಿರ ಹೆಕ್ಟೆರ್ ತೆಂಗು ಹಾಳು

» ಹೊಸದುರ್ಗ

ತೆಂಗು ಬೆಳೆಯ ಸಮಗ್ರ ಬೇಸಾಯ ಪದ್ಧತಿ ಹಾಗೂ ಕೀಟ ರೋಗಗಳ



ನಿರ್ವಹಣೆ ಕುರಿತು ತೆಂಗು ಬೆಳೆಯ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಅ. 13 ರಂದು ತಾಲೂಕಿನ ಶ್ರೀರಾಂಪುರ ದ ಬನಶಂಕರಿ ಸಮುದಾಯ ಭವನದಲ್ಲಿ ಆಯೋಜಿಸಲಾಗಿದೆ ಎಂದು ಶಾಸಕ ಬಿಜಿ ಗೋವಿಂದಪ್ಪ ಹೇಳಿದರು.

ಪಟ್ಟಣದ ಶಾಸಕರ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿ ತಾಲ್ಲೂಕಿನಲ್ಲಿ ಕಪ್ಪು ತಲೆ ಹುಳುವಿನ ಭಾದೆಯಿಂದ 41 ಸಾವಿರ ಹೆಕ್ಟೇರ್ ತೆಂಗು ಹಾಳಾಗಿದೆ ಶ್ರೀರಾಂಪುರ ಹೋಬಳಿಯಲ್ಲಿ ಅತಿಹೆಚ್ಚು 11 ಸಾವಿರ ಹೆಕ್ಟೇರ್ ನಲ್ಲಿ ತೆಂಗು ಬೆಳೆ ರೋಗ ಭಾದೆಗೆ ತುತ್ತಾಗಿದೆ ಈ ಹಿನ್ನಲೆಯಲ್ಲಿ ಪ್ರಾರಂಭಿಕ ಹಂತವಾಗಿ ಶ್ರೀರಾಂಪುರ ಹೋಬಳಿಯ ಶ್ರೀರಾಂಪುರ, ಹೆಗ್ಗೆರೆ, ಎಸ್ ನೆರಲಕೆರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ತೆಂಗು ಬೆಳೆಗಾರರಿಗೆ ರೋಗ ನಿಯಂತ್ರಣದ ಬಗ್ಗೆ ವಿಜ್ಞಾನಿಗಳಿಂದ ಮಾಹಿತಿ ಕೊಡಿಸಲಾಗುವುದು ಎಂದರು.ಪ್ರಾರಂಭಿಕ ಹಂತವಾಗಿ ಶ್ರೀರಾಂಪುರ ಹೋಬಳಿಯಲ್ಲಿ ತೆಂಗು ಪುನಶ್ಚೇತನ ಕ್ಕಾಗಿ ಸರ್ಕಾರದಿಂದ 2 ಕೋಟಿ ಹಣ ಬಿಡುಗಡೆ ಮಾಡ ಲಾಗಿದೆ. ರೋಗ ನಿಯಂತ್ರಣ ಕ್ಕೆ ಪ್ರತಿ ರೈತರಿಗೆ 1ಹೆಕ್ಟೇರ್ ಗೆ 44750 ರೂ ವೆಚ್ಚದಲ್ಲಿ ಜೈವಿಕ ಗೊಬ್ಬರ ಸೇರಿದಂತೆ ಸಹಾಯಧನ ನೀಡಲಾಗುವುದು ಎಂದರು.

ತೋಟಗಾರಿಕೆ ಇಲಾಖೆಯ ಸಹಾಯಕ ನಿರ್ದೇಶಕ ವೆಂಕಟೇಶ್ ಮೂರ್ತಿ ಮಾತನಾಡಿ ವಿಚಾರ ಸಂಕಿರಣದಲ್ಲಿ ಅರಸೀಕೆರೆಯ ತೋಟಗಾರಿಕೆ ಸಂಶೋಧನೆ ಮತ್ತು ವಿಸ್ತರಣೆ ಕೇಂದ್ರದ ವಿಜ್ಞಾನಿ ಡಾ ಕಿರಣ್ ಕುಮಾರ್, ರೋಗ ಶಾಸ್ತ್ರಜ್ಞ ಡಾ ಚಂದ್ರಶೇಖರ್, ಕೀಟ ಶಾಸ್ತ್ರಜ್ಞ ಡಾ ಜಗದೀಶ್ ಭಾಗವಹಿಸಲಿದ್ದು ರೋಗ ನಿರ್ವಹಣೆ ಬಗ್ಗೆ ರೈತರೊಂದಿಗೆ ಸಂವಾದ ನಡೆಸಲಿದ್ದಾರೆ ಈ ಕಾರ್ಯಕ್ರಮಕ್ಕೆ ತಾಲೂಕಿನ ಎಲ್ಲಾ ರೈತ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತೆಂಗು ಬೆಳೆಗೆ ಉಂಟಾಗಿರುವ ರೋಗ ಬಾದೆ ಕುರಿತು ತಾಂತ್ರಿಕ ಮಾಹಿತಿಯನ್ನು ಪಡೆಯುವಂತೆ ತಿಳಿಸಿದರು .

### ತೋಟಗಾರಿಕೆ ಕ್ಷೇತ್ರಗಳಲ್ಲಿ ಗುಣಮಟ್ಟದ ಗಿಡ ಮಾರಾಟಕ್ಕೆ ಲಭ್ಯ

ಚಿತ್ರದುರ್ಗ' ಜಿಲ್ಲೆಯ ತೋಟಗಾರಿಕೆ ಇಲಾಖೆಯ ವಿವಿಧ ತೋಟಗಾರಿಕೆ ಕ್ಷೇತ್ರಗಳಲ್ಲಿ ಉತ್ಕೃಷ್ಟ ಗುಣಮಟ್ಟದ ಕಸಿ/ಸಸಿ ಗಿಡಗಳು ಮಾರಾಟಕ್ಕೆ ಲಭ್ಯವಿವೆ. ಲಭ್ಯವಿರುವ ಸಸಿಗಳ ವಿವರ ಇಂತಿದೆ. ತೆಂಗು 62450 ಸಸಿಗಳು, ಅಡಿಕೆ 6806 ಸಸಿಗಳು, ನಿಂಬೆ 600 ಸಸಿಗಳು, ನುಗ್ಗೆ 8131 ಸಸಿಗಳು, ಕರಿಬೇವು 2000 ಸಸಿಗಳು ಹಾಗೂ ಅಂಜೂರ 2600 ಸಸಿಗಳು ಲಭ್ಯವಿವೆ. ತೋಟಗಾರಿಕೆ ಇಲಾಖೆಯಿಂದ ಮಾರಾಟ ದರ ಪ್ರತಿ ಒಂದಕ್ಕೆ ತೆಂಗಿನ ಸಸಿಗೆ ರೂ.75, ಅಡಿಕೆ ಸಸಿ ರೂ.25, ನಿಂಬೆ ಸಸಿ ರೂ.18, ನುಗ್ಗೆ ಸಸಿ ರೂ.10, ಕರಿಬೇವು ಸಸಿ ರೂ.15, ಅಂಜೂರ ಸಸಿಗೆ ರೂ.25/- ದರ ನಿಗಧಿಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯಕ ತೋಟಗಾರಿಕೆ ನಿರ್ದೇಶಕರಾದ ದೀಪಾ ಭೀಮಪ್ಪ ಹೊಂಕಳಿ ದೂ.7022522921, ಹೆಚ್.ಕೆ ಹರೀಶ್ 9108246371, ಕೃಷ್ಣಮೂರ್ತಿ 9986880609 ಸಂಪರ್ಕಿಸಬಹುದು.

### ಆಕ್ಷೇಪಣೆಗಳಿಗೆ ಅರ್ಜಿ ಆಹ್ವಾನ

ದಾವಣಗೆರೆ; ಮಲೇಬೆನ್ನೂರು ಪುರಸಭೆ ವ್ಯಾಪ್ತಿಯಲ್ಲಿ ನಿವೇಶನ, ವಸತಿ ರಹಿತರಿಗೆವಸತಿ ಸೌಲಭ್ಯಕಲ್ಪಿಸಲು ಅರ್ಜಿ ಆಹ್ವಾನಿಸಿ ಸ್ವೀಕರಿಸಲಾಗಿರುತ್ತದೆ. ಅದರಂತೆ ಸ್ವೀಕೃತವಾದ ಅರ್ಜಿಗಳನ್ನು ಮಲೇಬೆನ್ನೂರು ಪುರಸಭಾ ವೆಬ್ ಸೈಟ್ http://www.malebennurutown.mrc.gov.in ರಲ್ಲಿ ಪ್ರಕಟಿಸಲಾಗಿರುತ್ತದೆ.

## ಪ್ರಮುಖ ಸುದ್ದಿ

### ಕುಂಚಿಟಿಗ ಸಮುದಾಯವನ್ನು ಕೇಂದ್ರ ಸರ್ಕಾರ ಓಬಿಸಿಗೆ ಸೇರಿಸುವಂತೆ ಆಗ್ರಹಿಸಿ

# ಇಂದಿನಿಂದ ಹಿರಿಯೂರಿನಿಂದ ದುರ್ಗಕ್ಕೆ ಪಾದಯಾತ್ರೆ

» ಚಿತ್ರದುರ್ಗ

ಕುಂಚಿಟಿಗ ಸಮುದಾಯವನ್ನು ಕೇಂದ್ರ ಸರ್ಕಾರ ಓಬಿಸಿಗೆ ಸೇರಿಸುವಂತೆ ಆಗ್ರಹಿಸಿ ಇಂದಿನಿಂದ ಹಿರಿಯೂರಿನಿಂದ ಚಿತ್ರದುರ್ಗದವರೆಗೆ ಪಾದಯಾತ್ರೆಯನ್ನು ಪ್ರಾರಂಭಿಸಿದ್ದು, ಅ. 13 ರಂದು ಚಿತ್ರದುರ್ಗದಲ್ಲಿ ಉಪವಾಸ ಸತ್ಯಾಗ್ರಹವನ್ನು ಹಮ್ಮಿಕೊಳ್ಳಲಾಗಿದೆ ಎಂದು ಒಕ್ಕಲಿಗೆ ಸಂಘದ ಪ್ರಧಾನ ಕಾರ್ಯದರ್ಶಿ ಜಗನ್ನಾಥ್ ತಿಳಿಸಿದ್ದಾರೆ.

ಚಿತ್ರದುರ್ಗ ನಗರದ ಒಕ್ಕಲಿಗ ಸಂಘದ ಆವರಣದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ 18 ಜಿಲ್ಲೆಗಳಲ್ಲಿ 46 ತಾಲ್ಲೂಕುಗಳಲ್ಲಿ 26 ಲಕ್ಷಕ್ಕೂ ಅಧಿಕ ಸಂಖ್ಯೆಯಲ್ಲಿ ಇದ್ದು ಸಮುದಾಯವನ್ನು ಕೇಂದ್ರ ಸರ್ಕಾರ ಓಬಿಸಿಗೆ ಸೇರ್ಪಡೆ ಮಾಡುವಂತೆ ಆಗ್ರಹಿಸಿ 26 ವರ್ಷದಿಂದ ಹೋರಾಟ ನಡೆಯುತ್ತಿದೆ ಇದರ ಅಂಗವಾಗಿ ರಾಜ್ಯ ಸರ್ಕಾರ ಕುಂಚಿಟಿಗ ಕುಲ ಶಾಸ್ತ್ರ ಅಧ್ಯಯನ ವರದಿಯನ್ನು ತಯಾರಿಸಿ ಅದನ್ನು ರಾಜ್ಯ ಸಚಿವ ಸಂಪುಟದಲ್ಲಿ ಮಂಡಿಸಿ



ಅನುಮೋದನೆಯನ್ನು ಮಾಡಲಾಗಿದೆ. ಈಗ ಕೇಂದ್ರ ಸರ್ಕಾರ ನಮ್ಮ ಸಮುದಾಯವನ್ನು ಓಬಿಸಿಗೆ ಸೇರ್ಪಡೆ ಮಾಡಬೇಕಿದೆ ಎಂದು ಆಗ್ರಹಿಸಿದರು.

ಈಗ ಕೇಂದ್ರ ಸರ್ಕಾರದ ಮುಂದೆ ನಮ್ಮ ಸಮುದಾಯವನ್ನು ಓಬಿಸಿಗೆ ಸೇರ್ಪಡೆ ಮಾಡಬೇಕಿದೆ. ಇದನ್ನು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್, ಚಿದಾನಂದ ಗೌಡ, ಜವಾಬ್ದಾರಿಯನ್ನು ತೆಗೆದುಕೊಂಡು ದೆಹಲಿ ವಿಶೇಷ ಪ್ರತಿನಿಧಿ ಜಯಚಂದ್ರ ಮಾರ್ಗದರ್ಶನದಲ್ಲಿ ಕೇಂದ್ರ ಸಚಿವರಾದ ನಾರಾಯಣಸ್ವಾಮಿ ಸಹಕಾರದೊಂದಿಗೆ ಮುಂಬರುವ 2024ರ ಲೋಕಸಭಾ ಚುನಾವಣೆಗೂ ಮುನ್ನಾ ಕೇಂದ್ರ ಸರ್ಕಾರದ ಓಬಿಸಿ ಮೀಸಲಾತಿ ಪಟ್ಟಿಯಲ್ಲಿ ಸೇರಿಸಬೇಕಿದೆ. ಇಂದಿನಿಂದ ಪ್ರಾರಂಭವಾಗಿರುವ ಪಾದಯಾತ್ರೆಯ ನೇತೃತ್ವವನ್ನು ಓಬಿಸಿ ಹೋರಾಟಗಾರರಾದ ಕಸವನಹಳ್ಳಿ ರಮೇಶ್ ಮತ್ತು ಕುಲಶಾಸ್ತ್ರ ಅಧ್ಯಯನಕಾರ ಎಸ್.ವಿ.ರಂಗನಾಥ್ ವಹಿಸಿಕೊಳ್ಳಲಿದ್ದಾರೆ ಎಂದು ತಿಳಿಸಿದರು.

ಅ. 11 ರ ಇಂದು ಬೆಳಿಗ್ಗೆ 6 ಗಂಟೆಯಿಂದ ಹಿರಿಯೂರಿನಿಂದ ಪಾದಯಾತ್ರೆ ಪ್ರಾರಂಭವಾಗಿದ್ದು, ಇಂದು ಸಂಜೆ ರಾ.ಹೆ.4ರ ಬುರುಜನರೂಪ್ಪ ಶ್ರೀ ರಕ್ಷಾ ಗಣಪತಿ ದೇವಸ್ಥಾನದಲ್ಲಿ ವಾಸ್ತವ್ಯ ಮಾಡಲಿದ್ದು ಅ. 12ರ ಗುರುವಾರ ಬೆಳಿಗ್ಗೆ 6 ಗಂಟೆಯಿಂದ ಪಾದಯಾತ್ರೆ ಪ್ರಾರಂಭವಾಗಲಿದ್ದು, ಅಂದು ರಾತ್ರಿ ಚಿತ್ರದುರ್ಗದಲ್ಲಿ ವಾಸ್ತವ್ಯ ಮಾಡಲಿದ್ದು, ಅ. 13ರ ಶುಕ್ರವಾರ ಬೆಳಿಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಜಿಲ್ಲಾಧಿಕಾರಿಗಳ ಕಚೇರಿ ಮುಂಭಾಗದಲ್ಲಿ ಕುಂಚಿಟಿಗ ಸಮುದಾಯವನ್ನು ಕೇಂದ್ರ ಸರ್ಕಾರ ಓಬಿಸಿಗೆ ಸೇರಿಸುವಂತೆ ಆಗ್ರಹಿಸಿ ಉಪವಾಸ ಸತ್ಯಾಗ್ರಹ ನಡೆಸಿ ಮನವಿಯನ್ನು ಸಲ್ಲಿಸಲಾಗುವುದು ಎಂದು ಜಗನ್ನಾಥ್ ಹೇಳಿದರು. ಗೋಷ್ಠಿಯಲ್ಲಿ ಅಧ್ಯಕ್ಷ ಜಿ.ಪಿ.ಚೇತನ, ಮಾಜಿ ಗೌರವಾಧ್ಯಕ್ಷರಾದ ಹೆಚ್.ಆರ್.ತಿಮ್ಮಯ್ಯ, ಮಾಜಿ ಅಧ್ಯಕ್ಷರಾದ ಜಿ.ಹನುಮಂತಪ್ಪ, ಓ.ಎಲ್.ಜ್ಞಾನೇಶ್ವ ಕುಮಾರ್, ಸಹಾ ಕಾರ್ಯದರ್ಶಿ ಎಂ.ಡಿ.ಕುಮಾರ್, ನಿರ್ದೇಶಕರಾದ ಪರಮಶ್ವರ, ಚೇತನ, ರಂಗಧಾಮಯ್ಯ, ವ್ಯವಸ್ಥಾಪಕರಾದ ನರೇಂದ್ರಬಾಬು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ವೇದಾವತಿಯಲ್ಲಿ ಬಿದ್ದು ಯುವಕ ಸಾವು

» **ಹೊಸದುರ್ಗ**

ಯುವಕನೋರ್ವ ವೇದಾವತಿ ನದಿಯಲ್ಲಿ ಕಾಲುಜಾರಿ ಬಿದ್ದ ಪರಿಣಾಮ ಸಾವನ್ನಪ್ಪಿರುವ ಘಟನೆ ತಾಲೂಕಿನ ಕೆಲ್ಲೋಡು ಸಮೀಪ ವೇದಾವತಿ ನದಿಯಲ್ಲಿ ಬೆಳಕಿಗೆ ಬಂದಿದೆ.ಮೃತ ಯುವಕನನ್ನ ತಾಲೂಕಿನ ಕಂಗುವಳ್ಳಿ ಗ್ರಾಮದ ಮಹೇಶ್ವರಪ್ಪ ಎಂಬುವವರ ಪುತ್ರ ಶಶಿಧರ (28) ಎಂದು ತಿಳಿದು ಬಂದಿದ್ದು ಈತ ಬೆಂಗಳೂರಿನಲ್ಲಿ ಅಡುಗೆ ಭಟ್ಟನಾಗಿ ಕೆಲಸ ಮಾಡುತಿದ್ದ ಎಂದು ಹೇಳಲಾಗಿದ್ದು ಈ ಬಗ್ಗೆ ಹೊಸದುರ್ಗ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಮರಾಠ ಅಭಿವೃದ್ಧಿ ನಿಗಮ: ಸಾಲಸೌಲಭ್ಯಕ್ಕೆ ಅರ್ಜಿ

» **ಚಿತ್ರದುರ್ಗ**

ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2023-24ನೇ ಸಾಲಿಗೆ ಮರಾಠ ಸಮುದಾಯಗಳ ಅಭಿವೃದ್ಧಿಗಾಗಿ ವಿವಿಧ ಯೋಜನೆಯಡಿ ಸಾಲ ಸೌಲಭ್ಯಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಶಹಜೀರಾಜೇ ಸಮೃದ್ಧಿ ಸ್ವಯಂ ಉದ್ಯೋಗ ವೈಯಕ್ತಿಕ ಸಾಲ, ಅರಿವು-ಶೈಕ್ಷಣಿಕ ಸಾಲ, 2 ರಿಂದ 5 ಎಕರೆ ಜಮೀನು ಹೊಂದಿದವರಿಗೆ ಜೀಜಾವು-ಜಲ ಭಾಗ್ಯ (ಗಂಗಾ ಕಲ್ಯಾಣ ನೀರಾವರಿ), 8 ಲಕ್ಷ ಆದಾಯ ಮಿತಿ ಹೊಂದಿದವರಿಗೆ ರಾಜಶ್ರೀ ಶಾಹುಮಹಾರಾಜ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ, ಮರಾಠ ಮಿಲ್ಟ್ರಿ ಹೋಟೆಲ್, ಸ್ವಾವಲಂಬಿ ಸಾರಥಿ, ಬ್ಯಾಂಕುಗಳ ಸಹಯೋಗದೊಂದಿಗೆ ಸ್ವಯಂ ಉದ್ಯೋಗಕ್ಕಾಗಿ ಸಾಲ ಹಾಗೂ ಯುವ ಜನರಿಗೆ ಸರ್ಕಾರಿ ತರಬೇತಿ ಸಂಸ್ಥೆಗಳಲ್ಲಿ ಕೌಶಲ್ಯ ಅಭಿವೃದ್ಧಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ. ಯೋಜನೆಗಳಿಗೆ ಸೇವಾ ಸಿಂಧು ತಂತ್ರಾಂಶದಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಅಕ್ಟೋಬರ್ 30 ಕೊನೆ ದಿನ. ಶೈಕ್ಷಣಿಕ ಸಾಲ ಯೋಜನೆಗಳಿಗೆ ಕೊನೆ ದಿನಾಂಕ ಇರುವುದಿಲ್ಲ.ರಾಜ್ಯದ ಖಾಯಂ ನಿವಾಸಿಗಳಾದ, ಪ್ರವರ್ಗ-3(ಬಿ) ಅಡಿಯಲ್ಲಿ ಬರುವ ಮರಾಠ, ಮರಾಠ, ಅರೆ ಕ್ಷತ್ರಿ, ಅರೆ ಮರಾಠ, ಆರ್ಯಮರಾಠ, ಆರ್ಯ, ಆರ್ಯರು, ಕೊಂಕಣ, ಮರಾಠ, ಕ್ಷತ್ರಿಯ ಮರಾಠ,/ಕ್ಷತ್ರಿಯ ಮರಾಠ, ಕುಳವಾಡಿ ಸಮುದಾಯಗಳಿಗೆ ಸೇರಿದ ಜಾತಿ ಆದಾಯ ಪ್ರಮಾಣ ಪತ್ರ ಹೊಂದಿದ, 18 ರಿಂದ 55 ವರ್ಷಗಳ ಮಿತಿಯಲ್ಲಿರುವ, ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಕುಟುಂಬದ ಒಬ್ಬರಿಗೆ ಮಾತ್ರ ಸಾಲ ಸೌಲಭ್ಯ ಒದಗಿಸಲಾಗುವುದು, ಶೈಕ್ಷಣಿಕ ಹಾಗೂ ಸ್ವಾವಲಂಬಿ ಸಾರಥಿ ಯೋಜನೆಯಡಿ ಸಾಲ ಪಡೆಯುವ ಅಭ್ಯರ್ಥಿಗಳ ವಯೋಮಿತಿ 18 ರಿಂದ 30 ವರ್ಷಗಳು ಇರಬೇಕು. ಶೈಕ್ಷಣಿಕ ಸಾಲ ಮಂಜೂರಾತಿ ವಾರ್ಷಿಕ ರೂ.3.5 ಲಕ್ಷ, ಇತರೆ ಯೋಜನೆಗಳಿಗೆ ಗ್ರಾಮಾಂತರ ಪ್ರದೇಶದಲ್ಲಿ ವಾರ್ಷಿಕ ರೂ.98 ಸಾವಿರ ಹಾಗೂ ನಗರ ಪ್ರದೇಶದಲ್ಲಿ ವಾರ್ಷಿಕ ರೂ.1.20 ಲಕ್ಷ ಆದಾಯ ಮಿತಿ ನಿಗದಿಪಡಿಸಲಾಗಿದೆ. ಯೋಜನೆಗಳ ಫಲಾನುಭವಿಗಳ ಆಯ್ಕೆಯಲ್ಲಿ ನಿಯಮಾನುಸಾರ ಮಹಿಳೆಯರಿಗೆ ಶೇ.33 ವಿಕಲಚೇತನರಿಗೆ ಶೇ.5 ಹಾಗೂ ತೃತೀಯ ಲಿಂಗಿಗಳಿಗೆ ಶೇ.1% ರಷ್ಟು ಮೀಸಲಾತಿಯನ್ನು ನೀಡಲಾಗುವುದು. ಸೇವಾಸಿಂಧು ಪೋರ್ಟಲ್‌ನಡಿ ಗ್ರಾಮ ಒನ್, ಬೆಂಗಳೂರು ಒನ್, ಕರ್ನಾಟಕ-ಒನ್, ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಸೇವಾಸಿಂಧು ಪೋರ್ಟಲ್‌ನಡಿ ಅರ್ಜಿ ಸಲ್ಲಿಸಬಹುದು, ನಿರ್ದೇಶಕರ ಮಂಡಳಿಯ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯಬಯಸುವವರೂಸಹ ಆನ್‌ಲೈನ್ ನಲ್ಲಿ ಪ್ರತ್ಯೇಕ ಅರ್ಜಿಯನ್ನು ಸಲ್ಲಿಸುವುದು, ಒಂದು ಕುಟುಂಬದ ಬಬ್ಬ ಸದಸ್ಯರು ಮಾತ್ರ ಮೇಲ್ಕಂಡ ಯಾವುದಾದರೂ ಒಂದು ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಬಹುದು, ಅರ್ಜಿದಾರರು ಸರ್ಕಾರದ ಹಾಗೂ ನಿಗಮದ ನಿರ್ದೇಶಕ ಮಂಡಳಿಯು ಕಾಲಕಾಲಕ್ಕೆ ವಿಧಿಸುವ ಇನ್ನಿತರ ಅರ್ಹತೆ ಮತ್ತು ನಿಬಂಧನೆಗಳನ್ನು ಹೊಂದಿದವರಾಗಿರಬೇಕು. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್‌ಸೈಟ್ https://kmcdc.karnataka.gov.in ಅಥವಾ ಕಚೇರಿ ದೂರವಾಣಿ ಸಂಖ್ಯೆ 08194-220882 ಗೆ ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಇ. ಸಂಪತ್‌ಕುಮಾರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಎಡಿಜಿಪಿ ಭೇಟಿ ಜನಸ್ನೇಹಿ ಪೊಲೀಸ್ ಆಗಿ ಕಾರ್ಯನಿರ್ವಹಿಸಿ

» **ಮೊದಲ ಪುಟದಿಂದ**

ಆಡಳಿತಾತ್ಮಕವಾಗಿ ಜಿಲ್ಲಾ ಪೊಲೀಸ್ ಕಚೇರಿಯ ಲಿಪಿಕ ಸಿಬ್ಬಂದಿಯು ಉತ್ತಮವಾಗಿ ಕಾರ್ಯನಿರ್ವಹಿಸುವಂತೆ ಸಲಹೆ ನೀಡಿದರು. ಇದೇ ಸಂದರ್ಭದಲ್ಲಿ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳ ಕುಂದು ಕೊರತೆ, ಪೊಲೀಸ್ ಅಧಿಕಾರಿಗಳ ಕುಟುಂಬದವರ ಕುಂದು ಕೊರತೆಗಳ ವಿಚಾರಣೆ ನಡೆಸಿದರು. ಎಡಿಜಿಪಿ ಎಸ್. ಮುರುಗನ್ ಅವರು ಹಿರಿಯೂರು ಡಿ ಎಸ್ ಪಿ ಕಚೇರಿ, ಐಮಂಗಲ ಪೊಲೀಸ್ ಠಾಣೆ ಸೇರಿದಂತೆ ಜಿಲ್ಲೆಯ ವಿವಿಧ ಪೊಲೀಸ್ ಠಾಣೆಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಧರ್ಮೇಂದ್ರ ಕುಮಾರ್ ಮೀನಾ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ ಸೇರಿದಂತೆ ಪೊಲೀಸ್ ಇಲಾಖೆ ಅಧಿಕಾರಿಗಳು ಇದ್ದರು.

# ಮಾನಸಿಕ ಆರೋಗ್ಯದ ಕಡೆ ಗಮನ ಅಗತ್ಯ

» **ಚಿತ್ರದುರ್ಗ**

ದೈಹಿಕ ಆರೋಗ್ಯದ ಜತೆಗೆ ಮಾನಸಿಕ ಆರೋಗ್ಯ ಕಾಯ್ದುಕೊಳ್ಳುವುದು ಅತ್ಯಗತ್ಯವಾಗಿದ್ದು, ಮಾನಸಿಕ ಆರೋಗ್ಯವು ಸಾರ್ವತ್ರಿಕ ಮಾನವ ಹಕ್ಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ. ವಿಜಯ್ ಹೇಳಿದರು.

ನಗರದ ಶ್ರೀ ಗುರು ರಾಘವೇಂದ್ರ ವಿದ್ಯಾಸಂಸ್ಥೆಯಲ್ಲಿ ಮಂಗಳವಾರ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಮಾನಸಿಕ ಆರೋಗ್ಯ ಇಲಾಖೆ, ಶ್ರೀ ಗುರು ರಾಘವೇಂದ್ರ ವಿದ್ಯಾಸಂಸೆ ಇವರ ಸಂಯುಕ್ತಶ್ರದಲ್ಲಿ ಆಯೋಜಿಸಿದ್ದ ವಿಶ್ವ ಮಾನಸಿಕ ಆರೋಗ್ಯ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾನಸಿಕ ಆರೋಗ್ಯ ಕಾಪಾಡಿಕೊಳ್ಳುವುದು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ಮುಖ್ಯವಾದ ಅಂಶ. ಮಾನಸಿಕ ಆರೋಗ್ಯದ ರಕ್ಷಣೆಗಾಗಿ ಕಾನೂನಿನಲ್ಲಿ ಮಾನಸಿಕ ಆರೋಗ್ಯ ಕಾಯ್ದೆ ಇದೆ. ಕಾಯ್ದೆ ಅಡಿಯಲ್ಲಿ ಪ್ರತಿಯೊಬ್ಬ ಸಾರ್ವಜನಿಕರಿಗೂ ಗುಣಮಟ್ಟದ ಮಾನಸಿಕ ಆರೋಗ್ಯ ಚಿಕಿತ್ಸೆ ಪಡೆಯುವ ಹಕ್ಕಿದೆ ಎಂದು ತಿಳಿಸಿದರು.

ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿ ಡಾ.ಅಭಿನವ್ ಮಾತನಾಡಿ, ದೇಹದ




ಹಾಗೇ ಮನಸ್ಸಿಗೂ ಕೂಡ ಕಾಯಿಲೆಗಳು ಬರುತ್ತವೆ. ನಾವು ದೇಹಕ್ಕೆ ಕಾಯಿಲೆ ಆದಾಗ ಹೇಗೆ ಚಿಕಿತ್ಸೆ ಪಡೆಯುತ್ತೇವೆ ಹಾಗೆಯೇ ಮಾನಸಿಕ ಆರೋಗ್ಯಕ್ಕೂ ಕೂಡ ವೈದ್ಯರಲ್ಲಿ ಚಿಕಿತ್ಸೆ ಪಡೆಯಬೇಕು. ದೈಹಿಕವಾಗಿ ಆರೋಗ್ಯಕರವಾಗಿರಲು ಮಾನಸಿಕ ಆರೋಗ್ಯವು ಬಹುಮುಖ್ಯ, ಮಾನಸಿಕ ತೊಂದರೆಗಳಿದ್ದಲ್ಲಿ ಕ್ಲಿನಿಕಲ್ ಸೈಕಾಲಜಿಸ್ಟ್ ಬಳಿ ಸಲಹೆ ಪಡೆಯಬಹುದು ಹಾಗೂ ಮನೋವೈದ್ಯರಿಂದ ಚಿಕಿತ್ಸೆ ಪಡೆದು ಗುಣಮುಖರಾಗಲು ಸೂಚಿಸಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಅನುಷ್ಠಾನಾಧಿಕಾರಿ ಜಿ.ಓ. ಡಾ. ನಾಗರಾಜ್ ಮಾತನಾಡಿ, ಮಾನಸಿಕ ಆರೋಗ್ಯ ಕಾರ್ಯಕ್ರಮದ ಅಡಿಯಲ್ಲಿ ಮನೋವೈದ್ಯರು, ಸೈಕಾಲಜಿಸ್ಟ್ ಸೋಶಿಯಲ್ ವರ್ಕರ್, ಶುಶ್ರೂಷಾಧಿಕಾರಿಗಳು, ಡಿ.ಎಂ.ಹೆಚ್.ಪಿ ತಂಡವು ಜಿಲ್ಲಾ ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿದೆ. ಯಾವುದೇ ರೀತಿಯ ಮಾನಸಿಕ ರೋಗ ಲಕ್ಷಣಗಳು ಕಂಡುಬಂದಲ್ಲಿ ಚಿಕಿತ್ಸೆ ಪಡೆಯಬೇಕು. ಮಾನಸಿಕ ರೋಗಿಗಳನ್ನು ಬಂಧನದಲ್ಲಿರಿಸುವುದು, ಕಟ್ಟಿ ಹಾಕುವುದು, ಹಿಂಸೆ ಕೊಡುವುದು ಇವುಗಳಿಗೆ ಅವಕಾಶ ನೀಡಬಾರದು. ಮುಂಚಿತವಾಗಿ ಗುರುತಿಸಿ ಚಿಕಿತ್ಸೆ ನೀಡುವುದರ ಮೂಲಕ ಗುಣಪಡಿಸಬೇಕು ಎಂದರು.

ಯಾವುದೇ ರೀತಿಯ ಮಾನಸಿಕ ಆರೋಗ್ಯ ಸಮಸ್ಯೆಗಳಿದ್ದಲ್ಲಿ ಟೆಲಿ ಮಾನಸ ಟೋಲ್ ಫ್ರೀ ನಂಬರ್ 14416 ಗೆ ಕರೆ ಮಾಡಿ ಸಲಹೆ ಸಮಾಲೋಚನೆ ಪಡೆಯಬಹುದು ಎಂದು ತಿಳಿಸಿದರು.

ಜಿಲ್ಲಾ ವಕೀಲರ ಸಂಘದ ಉಪಾಧ್ಯಕ್ಷ ಬಿ.ಎಂ.ಅನಿಲ್ ಕುಮಾರ್ ಮಾತನಾಡಿ, ಮಾನಸಿಕ ಸಮಸ್ಯೆಗಳಿಗೆ ಚಿಕಿತ್ಸೆ ಪಡೆಯಲು ಮತ್ತು ಮಾನಸಿಕ ಆರೋಗ್ಯದ ಬಗ್ಗೆ ಕಳಂಕ ಮತ್ತು ತಾರತಮ್ಯ ಹೋಗಲಾಡಿಸಿ ಜಾಗೃತರಾಗಬೇಕು ಎಂದು ತಿಳಿಸಿದರು.

ಮನೋವೈದ್ಯ ಆರ್.ಡಾ.ಮಂಜುನಾಥ್ ಉಪನ್ಯಾಸ ನೀಡಿ, ಪ್ರತಿ ವರ್ಷ ಒಂದೊಂದು ಘೋಷವಾಕ್ಯದೊಂದಿಗೆ ಮಾನಸಿಕ ಆರೋಗ್ಯ ದಿನಾಚರಣೆ ಆಚರಿಸಲಾಗುತ್ತದೆ ಅದರಂತೆ ಈ ವರ್ಷದ ಘೋಷವಾಕ್ಯ ಮಾನಸಿಕ ಆರೋಗ್ಯವು ಸಾರ್ವತ್ರಿಕ ಮಾನವ ಹಕ್ಕು ಆಗಿರುವುದರಿಂದ ಉತ್ತಮ ಗುಣಮಟ್ಟದ ಮಾನಸಿಕ ಆರೋಗ್ಯ ಚಿಕಿತ್ಸೆಯನ್ನು ಪಡೆಯುವ ಹಕ್ಕು ಎಲ್ಲರಿಗೂ ಇದೆ. ಮಾನಸಿಕ ಕಾಯಿಲೆಗಳು ಒಟ್ಟಾರೆ ಜನಸಂಖ್ಯೆಯಲ್ಲಿ ಮಾನಸಿಕ ಕಾಯಿಲೆಗೆ 13 ರಷ್ಟು ಒಳಗಾಗುತ್ತಾರೆ. ಇವರೆಲ್ಲರಿಗೂ ಕೂಡ ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಉಚಿತ ಸಮಾಲೋಚನೆ ಮತ್ತು ಚಿಕಿತ್ಸೆ ದೊರೆಯುತ್ತದೆ. ಎಲ್ಲಾ ಮಾನಸಿಕ ಕಾಯಿಲೆಗಳಿಗೂ ಔಷಧಿಗಳಿವೆ, ಸಾಮಾನ್ಯಕರವಾದ ಮಾನಸಿಕ ಕಾಯಿಲೆಗಳಾದ ಖಿನ್ನತೆ, ಆತಂಕ, ಗೀಳು, ಮನೋವಿಕೃತಿ ಈ ಲಕ್ಷಣಗಳು ಸಮಾಲೋಚನೆಯಿಂದ ಗುಣಮುಖರಾಗುತ್ತಾರೆಂದು ತಿಳಿಸಿದರು. ತೀವ್ರತರವಾದ ಮಾನಸಿಕ ರೋಗಿಗಳಿಗೆ ಔಷದೋಪಚಾರದ ಚಿಕಿತ್ಸೆಯಿಂದ ಸಂಪೂರ್ಣವಾಗಿ ಗುಣಪಡಿಸಬಹುದು.

ಕಾರ್ಯಕ್ರಮದಲ್ಲಿ ಶ್ರೀ ಗುರು ರಾಘವೇಂದ್ರ ವಿದ್ಯಾಸಂಸ್ಥೆ ಅಧ್ಯಕ್ಷ ಹೆಚ್. ಶ್ರೀನಿವಾಸ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಬಿ.ವಿ.ಗಿರೀಶ್, ವಕೀಲರ ಸಂಘದ ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್, ವಕೀಲರಾದ ಹನುಮಂತಪ್ಪ, ಪ್ರಾಂಶುಪಾಲ ಡಾ.ಬಸವರಾಜ್, ಗುರು ರಾಘವೇಂದ್ರ ವಿದ್ಯಾ ಸಂಸ್ಥೆಯ ವ್ಯವಸ್ಥಾಪಕ ಮೋನಿಕಾ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಶ್ರೀಧರ್, ಜಿಲ್ಲೆಯ ಕುಷ್ಠರೋಗ ನಿಯಂತ್ರಣ ಅಧಿಕಾರಿಗಳ ಕಚೇರಿಯ ಆರೋಗ್ಯ ನಿರೀಕ್ಷಕರಾದ ವೈ. ತಿಪ್ಪೇಶ, ಯು.ಕಿರಣ, ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮ ಸಿಬ್ಬಂದಿಗಳಾದ ಟಿ.ಶ್ರೀಧರ, ಎನ್.ಸುನೀತ, ಕೆ.ಎಂ.ರಶ್ಮಿ, ಆರ್.ರೂಪ, ಆರ್.ಅರುಣಾಕೀರ್ತಿ, ಟಿ.ಶಿವರಾಜ್ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಮೂರ್ತಿ ಜಿಲ್ಲಾ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಪ್ರಧಾನ ಕಾರ್ಯದರ್ಶಿ

» **ಚಿತ್ರದುರ್ಗ**

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯಾಧ್ಯಕ್ಷ ಎಸ್.ಮಧುಬಂಗಾರಪ್ಪನವರ ಆದೇಶದಂತೆ ಹೊಸದುರ್ಗ ತಾಲ್ಲೂಕು ಚಿತ್ತಯ್ಯನಹಟ್ಟಿ ಗ್ರಾಮದ ಮೂರ್ತಿ ಎಂ. ಇವರನ್ನು ಜಿಲ್ಲಾ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಪ್ರಧಾನ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಲಾಗಿದೆ.

ಜಿಲ್ಲಾ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್ ಕಾಂಗ್ರೆಸ್ ಕಚೇರಿಯಲ್ಲಿ ಮೂರ್ತಿ ಎಂ. ಇವರಿಗೆ ನೇಮಕಾತಿ ಪತ್ರ ನೀಡಿ ಮಾತನಾಡುತ್ತ ಪಕ್ಷದಲ್ಲಿ ಹುದ್ದೆ ಪಡೆದುಕೊಂಡು ಮನೆಯಲ್ಲಿ ಕುಳಿತುಕೊಳ್ಳಬಾರದು.

ಜಿಲ್ಲೆಯಾದ್ಯಂತ ಸಂಚರಿಸಿ ಹಿಂದುಳಿದ ವರ್ಗಗಳ ವಿಭಾಗವನ್ನು ಸಂಘಟಿಸಿ ಪಕ್ಷಕ್ಕೆ ಶಕ್ತಿ ತುಂಬುವ ಕೆಲಸ ಮಾಡಬೇಕು ಎಂದು ಸೂಚಿಸಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕೆ.ಪಿ.ಸಂಪತ್‌ಕುಮಾರ್ ಮಾತನಾಡಿ ತಾಲ್ಲೂಕು ಪಂಚಾಯಿತಿ, ಜಿಲ್ಲಾ ಪಂಚಾಯಿತಿ ಚುನಾವಣೆ ಎದುರಾಗುವುದರಿಂದ ಈಗಿನಿಂದಲೇ ಪಕ್ಷ ಸಂಘಟನೆಯಲ್ಲಿ ಪ್ರಾಮಾಣಿಕವಾಗಿ ಶ್ರಮಿಸಬೇಕು. ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪನವರ



**ಜಿಲ್ಲಾ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಪ್ರಧಾನ ಕಾರ್ಯದರ್ಶಿಯಾಗಿ ನೇಮಕಗೊಂಡಿರುವ ಮೂರ್ತಿ ಎಂ. ಇವರಿಗೆ ನೇಮಕಾತಿ ಪತ್ರ ವಿತರಣೆ.**

ಶಿಫಾರಸ್ಸಿನ ಮೇರೆಗೆ ನಿಮ್ಮನ್ನು ಪ್ರಧಾನ ಕಾರ್ಯದರ್ಶಿಯನ್ನಾಗಿ ನೇಮಕ ಮಾಡಲಾಗಿದೆ. ಅವರ ಮಾರ್ಗದರ್ಶನದಂತೆ ನಡೆಯಬೇಕು ಎಂದು ಹೇಳಿದರು.

ಹೊಸದುರ್ಗ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪದ್ಮನಾಭ ಮಾತನಾಡುತ್ತ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರದಲ್ಲಿದೆ. ಮುಂದಿನ ವರ್ಷ ನಡೆಯಲಿರುವ ಲೋಕಸಭಾ ಚುನಾವಣೆ ಹಾಗೂ ಜಿಲ್ಲಾ ಪಂಚಾಯಿತಿ ತಾಲ್ಲೂಕು ಪಂಚಾಯಿತಿ ಚುನಾವಣೆಯಲ್ಲಿ ಪಕ್ಷದ ಪರವಾಗಿ ನಿಷ್ಠೆಯಿಂದ ಕೆಲಸ ಮಾಡಿ ಕಾಂಗ್ರೆಸ್‌ಗೆ ಶಕ್ತಿ ತುಂಬಬೇಕು ಎಂದು ಮೂರ್ತಿ ಎಂ.ಗೆ ತಿಳಿಸಿದರು.

ಜಿಲ್ಲಾ ಕಾಂಗ್ರೆಸ್ ಪದವೀಧರ ವಿಭಾಗದ ಅಧ್ಯಕ್ಷ ಮುದಸಿರ್ ನವಾಜ್, ಮೀನುಗಾರಿಕೆ ವಿಭಾಗದ ಶಶಿಕಿರಣ್, ಚಾಂದ್‌ಪೀರ್, ಹೊಸದುರ್ಗ ತಾಲ್ಲೂಕು ಕಾಡುಗೊಲ್ಲರ ಸಂಘದ ಅಧ್ಯಕ್ಷ ರವಿಕುಮಾರ್, ಯೂತ್ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಈಶ್ವರ್, ಬಸವರಾಜ್, ಶಿವಣ್ಣ, ಯತೀಶ್, ಮೂರ್ತಿ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಕಬೀರಾನಂದಸ್ವಾಮಿ ಆಶ್ರಮದಲ್ಲಿ 15 ರಿಂದ 24ರವರಗೆ ಶರನ್ನವರಾತ್ರಿ

» **ಚಿತ್ರದುರ್ಗ**

ನಗರದ ಕಬೀರಾನಂದ ನಗರದ ಶ್ರೀ ಸದ್ಗುರು ಕಬೀರಾನಂದಸ್ವಾಮಿ



ಆಶ್ರಮದಲ್ಲಿ ಶ್ರೀ ಭಗವತಿ ಬಗಳಾಂಬಿಕಾದೇವಿ ಆವರಣದಲ್ಲಿ ಅ. 15 ರಿಂದ 24ರವರಗೆ ಶರನ್ನವರಾತ್ರಿ ಕಾರ್ಯಕ್ರಮ ವಿಜಯದಶಮಿಯವರೆಗೆ ಶ್ರೀ ದೇವಿ ಪುರಾಣ ನಡೆಯಲಿದೆ ಎಂದು ಆಶ್ರಮದ ಗಣಪತಿ ಶಾಸ್ತ್ರಿ ತಿಳಿಸಿದ್ದಾರೆ.

ಶ್ರೀ ಮಠದ ಪೀಠಾಧ್ಯಕ್ಷರಾದ ಸದ್ಗುರು ಶ್ರೀ ಶಿವಲಿಂಗಾನಂದ ಶ್ರೀಗಳು ಸಾನಿದ್ಯದಲ್ಲಿ ಅ.15 ರಿಂದ 24ರವರೆಗೆ ಪ್ರತಿ ದಿನ ಸಂಜೆ 7 ರಿಂದ 9ವರೆಗೆ ಗೊಲ್ಲರಹಟ್ಟಿಯ ಶಿ.ಈರಣ್ಣ ಮಲ್ಲಾಪುರ ಇವರು ಚರಿತ್ರೆಯನ್ನು ಪಠಿಸಲಿದ್ದು, ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಕಾರ್ಯದರ್ಶಿ ಹುರಳಿ ಬಸವರಾಜು ರವರು ಚರಿತ್ರೆಯನ್ನು ಪ್ರವಾಚನ ಮಾಡಲಿದ್ದಾರೆ. ಆಯಿತೋಳಿನ ಜಾನಪದ ಕಲಾವಿದರಾದ ಜಿ.ಎನ್.ವಿರೂಪಾಕ್ಷಪ್ಪ ಹಾರ್ಮೋನಿಯಂ, ಜಿ.ಸಿ.ಯಶವಂತಕುಮಾರ್ ತಬಲವನ್ನು ನುಡಿಸಲಿದ್ದಾರೆ. ಅ. 23ರ ಸೋಮವಾರ ಆಯುಧ ಪೂಜೆ, ಮಹಾನವಮಿ, ಶ್ರೀ ಸದ್ಗುರು ಕಬೀನಂದಾಶ್ರಮದ ಸಂಸ್ಕೃತ ಪಾಠಶಾಲೆಯ ಶಿಕ್ಷಕರಾದ ಸುಬ್ರಾಯ ತಿಮ್ಮಣ್ಣ ಭಟ್ಟರಿಂದ ಚಂಡಿಕಾ ಹೋಮ ನಡೆಯಲಿದೆ. ಬನ್ನಿಯನ್ನು ಮುಡಿಯಲಾಗುವುದು. ಸಂಜೆ 7 ಗಂಟೆಗೆ ಶ್ರೀ ದೇವಿ ಪುರಾಣ ಮುಕ್ತಾಯವಾಗಲಿದೆ. ಅ. 24 ರಂದು ಮಂಗಳವಾರ ವಿಜಯದಶಮಿ ಸಂಜೆ 4 ಗಂಟೆಗೆ ಶ್ರೀ ಮಠದ ಕರ್ತೃಗಳಾದ ಶ್ರೀ ಸದ್ಗುರು ಕಬೀರಾನಂದ ಮಹಾ ಸ್ವಾಮಿಗಳವರ 117 ನೇ ವರ್ಷದ ಜಯಂತ್ಯೋತ್ಸವ (ತೊಟ್ಟಿಲು ಪೂಜೆ) ಕಾರ್ಯಕ್ರಮ ನಡೆಯಲಿದೆ. ಪ್ರತಿ ದಿನ ಸಂಜೆ 5.30 ರಿಂದ 6.30ರವರೆಗೆ ಸಂಸ್ಕೃತ ಪಾಠಶಾಲೆಯ ಶಿಕ್ಷಕಿಯಾದ ಶ್ರೀಮತಿ ಬಿ.ಕೆ.ಸುಮನ ಇವರಿಂದ ಲಲಿತಾ ಸಹಸ್ರನಾಮ ಸ್ತೋತ್ರ ನಡೆಸಿಕೊಡಲಿದ್ದಾರೆ. ಶ್ರೀ ದೇವಿಗೆ ನಿತ್ಯವು ಪಂಚಾಮೃತ ಅಭೀಷೇಕ ನಡೆಯಲಿದೆ.

## ಸಾಮಾಜಿಕ ಭದ್ರತೆ ಯೋಜನೆಯ ಫಲಾನುಭವಿಗಳು ಎನ್‌ಪಿಸಿಐ ಮಾಡಿಸಿಕೊಳ್ಳುವಂತೆ ತಹಶೀಲ್ದಾರ್ ಮನವಿ

**ಚಳ್ಳಕೆರೆ:** ತಾಲ್ಲೂಕಿನ ಸಮಸ್ತ ಸಾಮಾಜಿಕ ಭದ್ರತೆ ಯೋಜನೆಯ ಫಲಾನುಭವಿಗಳಿಗೆ ಕಂದಾಯ ಸಚಿವರ ಮಾರ್ಗದರ್ಶನದಂತೆ ಜಿಲ್ಲಾಧಿಕಾರಿಗಳ ಸೂಚನೆಯಂತೆ ಈಗಾಗಲೇ ಸರ್ಕಾರದಿಂದ ಮಂಜೂರಾಗಿರುವ ಎಲ್ಲಾ ಸಾಮಾಜಿಕ ಭದ್ರತೆ ಫಲಾನುಭವಿಗಳು ತಮ್ಮ ಖಾತೆಯ ಬ್ಯಾಂಕ್‌ಗೆ ತೆರಳಿ ಆಧಾರ ಜೋಡಣೆಯೊಂದಿಗೆ ಎನ್‌ಪಿಸಿಐ ಮಾಡಿಸಿಕೊಳ್ಳುವಂತೆ ತಹಶೀಲ್ದಾರ್ ರೇಹಾನ್ ಪಾಷ ಮನವಿ ಮಾಡಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಅ.10ರಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಅದ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತಾಲ್ಲೂಕಿನ ಸಾಮಾಜಿಕ ಭದ್ರತೆ ಯೋಜನೆಗಳಾದ ಇಂದಿರಾಗಾಂಧಿ ವೃದ್ದಾಪ್ಯವೇತನ, ಸಂಧ್ಯಾಸುರಕ್ಷ, ಅಂಗವಿಕಲ ವೇತನ, ವಿಧವಾವೇತನ, ಮನಸ್ವಿನಿ ಮತ್ತು ಮೈತ್ರಿ ಯೋಜನೆಯ ಎಲ್ಲಾ ಫಲಾನುಭವಿಗಳು ತಪ್ಪದೆ ತಮ್ಮ ವ್ಯಾಪ್ತಿಯ ಬ್ಯಾಂಕ್‌ಗೆ ತೆರಳಿ ತಮ್ಮ ಖಾತೆಗೆ ಆಧಾರ ಜೋಡಣೆಯೊಂದಿಗೆ ಎನ್‌ಪಿಸಿಐಯನ್ನು ಅ.20ರೊಳಗೆ ಮಾಡಿಸಿಕೊಳ್ಳಬೇಕು. ಎನ್‌ಪಿಸಿಐ ಮಾಡಿಸದೆ ಇರುವವರಿಗೆ ಯಾವುದೇ ಕಾರಣಕ್ಕೂ ಯಾವುದೇ ವೇತನ ನೀಡಲು ಸಾಧ್ಯವಿಲ್ಲ. ಆದ್ದರಿಂದ ಪ್ರತಿಯೊಬ್ಬರೂ ಸರ್ಕಾರದ ಆದೇಶದಂತೆ ಬ್ಯಾಂಕ್‌ಗಳಿಗೆ ತೆರಳಿ ಆಧಾರ ಜೋಡಣೆಯೊಂದಿಗೆ ಎನ್‌ಪಿಸಿಐ ಮಾಡಿಸಿಕೊಳ್ಳಬೇಕು. ಈ ಬಗ್ಗೆ ಇನ್ನಷ್ಟು ಸ್ಪಷ್ಟ ಮಾಹಿತಿ ಬೇಕಾದಲ್ಲಿ ವಿವಿಧ ಗ್ರಾಮ ಪಂಚಾಯಿತಿ ಪಿಡಿಒ, ಗ್ರಾಮ ಲೆಕ್ಕಾಧಿಕಾರಿ, ಕಂದಾಯಾಧಿಕಾರಿ, ಅಂಚೆ ಕಚೇರಿ ತೆರಳಿ ಮಾಹಿತಿಯನ್ನು ಪಡೆಯಬಹುದಾಗಿದೆ. ಅಂಚೆ ಕಚೇರಿಯ ಮೂಲಕ ವೇತನ ಪಡೆಯುವವರೂ ಸಹ ಎನ್‌ಪಿಸಿಐ ವ್ಯಾಪ್ತಿಗೆ ಒಳಪಡಿಸಲಾಗಿದ್ದು, ಪ್ರತಿಯೊಬ್ಬರೂ ಈ ಬಗ್ಗೆ ಹೆಚ್ಚು ಗಮನಹರಿಸುವಂತೆ ಅವರು ಮನವಿ ಮಾಡಿದ್ದಾರೆ. ಯಾವುದೇ ಫಲಾನುಭವಿ ಆಧಾರ ಜೋಡಣೆಯೊಂದಿಗೆ ಎನ್‌ಪಿಸಿಐ ಮಾಡಿಸದೇ ಇದ್ದಲ್ಲಿ ಅವರಿಗೆ ಸರ್ಕಾರದಿಂದ ಯಾವುದೇ ವೇತನ ಪಾವತಿಯಾಗುವುದಿಲ್ಲವೆಂದು ಸ್ಪಷ್ಟವಾಗಿ ತಿಳಿಸಿದ್ದಾರೆ.

**ಪ್ರಮುಖ ಸುದ್ದಿ**

# ಮಹರ್ಷಿ ವಾಲ್ಮೀಕಿ ಜಯಂತಿ: ಅರ್ಥಪೂರ್ಣ ಆಚರಣೆ

» **ಮೊದಲ ಪುಟದಿಂದ**

ಮುಖ್ಯವಾಗಿ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದಾಗ ಮಾತ್ರ ಜಯಂತಿ ಆಚರಣೆಗಳಿಗೆ ಮೆರುಗು ಬರಲಿದೆ, ಹೀಗಾಗಿ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು, ಎಲ್ಲ ಸಮಾಜದವರು ಪಾಲ್ಗೊಳ್ಳಬೇಕು ಎಂದರು.

ಸರ್ಕಾರದ ಶಿಷ್ಟಾಚಾರದ ಅನುಸಾರ ಆಹ್ವಾನಪತ್ರಿಕೆಮುದ್ರಿಸಿ, ಜನಪ್ರತಿನಿಧಿಗಳನ್ನು ಜಯಂತಿಗೆ ಆಹ್ವಾನಿಸಲಾಗುವುದು. ಉತ್ತಮ ವಾಗ್ಮಿಗಳಿಂದ ಉಪನ್ಯಾಸ ಹಾಗೂ ಗೀತ ಗಾಯನ ಕಾರ್ಯಕ್ರಮ ಆಯೋಜಿಸಲಾಗುವುದು. ಸಮುದಾಯದಲ್ಲಿ ಸಾಧನೆ ತೋರಿದ ಸಾಧಕರಿಗೆ ಸನ್ಮಾನಿಸಲಾಗುವುದು ಎಂದು ತಿಳಿಸಿದರು.

ನಗರಸಭೆ ವತಿಯಿಂದ ತ.ರಾ.ಸು ರಂಗಮಂದಿರದ ಸ್ವಚ್ಛತಾ ಕಾರ್ಯ ಹಾಗೂ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ ಕಲ್ಪಿಸಬೇಕು. ತೋಟಗಾರಿಕೆ ಇಲಾಖೆ ವತಿಯಿಂದ ವೇದಿಕೆ ಕಾರ್ಯಕ್ರಮದ ಸ್ಥಳದಲ್ಲಿ ಹೂವಿನ ಕುಂಡಗಳನ್ನು ನೀಡಬೇಕು. ಕನ್ನಡ ಮತ್ತು ಸಂಸ್ಕೃತಿ



ಇಲಾಖೆ ಇಲಾಖೆ ಅಧಿಕಾರಿಗಳು ತ.ರಾ.ಸು ರಂಗಮಂದಿರ ಕಾಯ್ದಿರಿಸುವುದರೊಂದಿಗೆ ಅಗತ್ಯ ಕಲಾತಂಡದ ವ್ಯವಸ್ಥೆ ಹಾಗೂ ಪೊಲೀಸ್ ಇಲಾಖೆ ವತಿಯಿಂದ ಸೂಕ್ತ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸುವಂತೆ ತಿಳಿಸಿದರು.

ಮಹರ್ಷಿ ವಾಲ್ಮೀಕಿ ಜಯಂತಿ ಕೇವಲ ಒಂದು ಸಮುದಾಯಕ್ಕೆ ಒಳಗೊಂಡಂತೆ ಜಿಲ್ಲೆಯಲ್ಲಿ ಅರ್ಥಪೂರ್ಣವಾಗಿ ಹಾಗೂ ಜಯಂತಿ ಯಶಸ್ವಿಗೆ ವಿವಿಧ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದ ಅವರು, ಜಯಂತಿ ಕಾರ್ಯಕ್ರಮಕ್ಕೆ ಎಲ್ಲಾ ಅಧಿಕಾರಿಗಳು ಕಡ್ಡಾಯವಾಗಿ ಹಾಜರಾಗಬೇಕು. ವಸತಿ ನಿಲಯ ಹಾಗೂ ಶಾಲಾ ವಿದ್ಯಾರ್ಥಿಗಳಿಗೆ ಭಾಷಣ, ಪ್ರಬಂಧ, ಉಪನ್ಯಾಸ ಮಾಲಿಕೆ ಕಾರ್ಯಕ್ರಮ ಹಮ್ಮಿಕೊಂಡು ವಾಲ್ಮೀಕಿ ಕುರಿತು ಅರಿವು ಮೂಡಿಸಬೇಕು ಎಂದು ಶಿಕ್ಷಣ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಕಚೇರಿ ಸ್ಥಳಾಂತರಿಸಿ: ಚಿತ್ರದುರ್ಗ ನಗರದ ಜೆಸಿಆರ್ 4ನೇ ಕ್ರಾಸ್ ಹತ್ತಿರ ಇರುವ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿಯನ್ನು ಸಾರ್ವಜನಿಕರ ಹಿತದೃಷ್ಟಿಯಿಂದ ನಗರದ ಬಿ.ಡಿ.ರಸ್ತೆಯ ಪ್ರವಾಸಿ ಮಂದಿರದ ಸಮೀಪ ಲಿಡ್ಕರ್ ಭವನಕ್ಕೆ ಸ್ಥಳಾಂತರಿಸಬೇಕು ಎಂದು ಚಿತ್ರದುರ್ಗ ತಾಲ್ಲೂಕು ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜ್ ಅಪರ ಜಿಲ್ಲಾಧಿಕಾರಿಗಳಿಗೆ ಇದೇ ಸಂದರ್ಭದಲ್ಲಿ ಮನವಿ ಮಾಡಿದರು.

ಸಾರ್ವಜನಿಕರಿಗೆ ಅನುಕೂಲ ವಾಗುವ ನಿಟ್ಟಿನಲ್ಲಿ ವಾರದೊಳಗೆ ಕಚೇರಿ ಸ್ಥಳಾಂತರ ಮಾಡುವಂತೆ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ ಅವರಿಗೆ ಅಪರ ಜಿಲ್ಲಾಧಿಕಾರಿಗಳು ಸ್ಥಳದಲ್ಲಿಯೇ ಸೂಚನೆ ನೀಡಿದರು.ಸಭೆಯಲ್ಲಿ ಜಿಲ್ಲಾ ನಾಯಕ ಸಮಾಜದ ಅಧ್ಯಕ್ಷ ಹೆಚ್. ಜೆ.ಕೃಷ್ಣಮೂರ್ತಿ, ತಾಲ್ಲೂಕು ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜ್, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಓ.ಪರಮೇಶ್ವರಪ್ಪ, ನಗರಸಭೆ ಆಯುಕ್ತೆ ರೇಣುಕಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಮಲ್ಲಿಕಾರ್ಜುನ, ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಸೇರಿದಂತೆ ಸಮಾಜದ ಮುಖಂಡರು ಇದ್ದರು.

## ಫಾಸ್ಟ್ ನ್ಯೂಸ್

### ಅ.14 ರಂದು ತಾತ್ಕಾಲಿಕವಾಗಿ ಬಸ್‌ಗಳನ್ನು ಬೇರೆ ಕಡೆ ನಿಲುಗಡೆ ಮಾಡಲು ಆದೇಶ

» ದಾವಣಗೆರೆ

ಅ.14 ರಂದು ದಾವಣಗೆರೆ ನಗರದ ಹೈಸ್ಕೂಲ್ ಮೈದಾನದಲ್ಲಿ ಪ್ರತಿಷ್ಠಾಪನೆ ಮಾಡಿರುವ ಗಣೇಶ ಮೂರ್ತಿಯ ವಿಸರ್ಜನೆ ಮೆರವಣಿಗೆ ಸಂದರ್ಭದಲ್ಲಿ ಹೆಚ್ಚಿನ ಜನ ಸೇರುವ ಸಾಧ್ಯತೆ ಇರುವ ಹಿನ್ನಲೆಯಲ್ಲಿ ಸಾರ್ವಜನಿಕರಿಗೆ ಮತ್ತು ವಾಹನಗಳ ಸಂಚಾರಕ್ಕೆ ತೊಂದರೆಯುಂಟಾಗುವ ಕಾರಣ ಹಾಗೂ ಕಾನೂನು ಸುವ್ಯವಸ್ಥೆಯನ್ನು ಕಾಪಾಡುವ ಸಲುವಾಗಿ ಸಾರ್ವಜನಿಕ ಹಿತದೃಷ್ಟಿಯಿಂದ ಅ.14 ರಂದು ಬೆಳಗ್ಗೆ 6.00 ರಿಂದ ರಾತ್ರಿ 10.00 ಗಂಟೆಯವರೆಗೆ ಮಾತ್ರ ದಾವಣಗೆರೆ ನಗರದ ಕೆಎಸ್‌ಆರ್‌ಟಿಸಿ ಮತ್ತು ಖಾಸಗಿ ಬಸ್‌ನಿಲ್ದಾಣಗಳಿಗೆ ಬರುವ ಬಸ್‌ಗಳನ್ನು ಈ ಕೆಳಕಂಡ ಸ್ಥಳಗಳಲ್ಲಿ ನಿಲುಗಡೆ ಮಾಡಿಕೊಂಡು ಅಲ್ಲಿಂದಲೇ ವಾಪಸ್ ತೆರಳಲು ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಗಳಾದ ಡಾ.ವೆಂಕಟೇಶ್.ಎಂ.ವಿ ರವರು ಆದೇಶಿಸಿದ್ದಾರೆ.

ಹಿಂದೂ ಮಹಾ ಗಣಪತಿ ಮೂರ್ತಿ ವಿಸರ್ಜನಾ ಮೆರವಣಿಗೆಯು ಎ.ವಿ.ಕೆ ರಸ್ತೆ, ಚೇತನ್ ಹೋಟೆಲ್ ಎಡಭಾಗದಿಂದ ಅಂಬೇಡ್ಕರ್ ವೃತ್ತ, (ಮುಸ್ಲಿಂ ಹಾಸ್ಟೇಲ್ ಕಾಂಪ್ಲೆಕ್ಸ್), ಜಯದೇವ ಸರ್ಕಲ್, ಲಾಯರ್ ರಸ್ತೆ, ಪಿ.ಬಿ .ರಸ್ತೆ, ಗಾಂಧಿ ವೃತ್ತ, ಹಳೇ ಬಸ್ ನಿಲ್ದಾಣ, ಅರಸು ಕ್ರಾಸ್, ಮಹಾನಗರ ಪಾಲಿಕೆ, ರಾಣಿ ಚೆನ್ನಮ್ಮ ವೃತ್ತ, ಈದ್ಗಾ ಮೈದಾನ (ಖಬರಸ್ಥಾನ್), ಮದೀನ ಮಸೀದಿ, ಕೋರ್ಟ್ ವೃತ್ತದ ಮೂಲಕ ಸಂಗೊಳ್ಳಿ ರಾಯಣ್ಣ ವೃತ್ತಕ್ಕೆ ಬಂದು ಮೆರವಣಿಗೆಯನ್ನು ಮುಕ್ತಾಯ ಮಾಡಿ ನಂತರ ಗಣೇಶ ಮೂರ್ತಿಯನ್ನು ಬಾತಿ ಕೆರೆಯಲ್ಲಿ ವಿಸರ್ಜನೆ ಮಾಡಲಾಗುತ್ತದೆ.

ಮಾರ್ಗ ಬದಲಾವಣೆ ವಿವರ: ಚನ್ನಗಿರಿ ರಸ್ತೆ ಕಡೆಯಿಂದ ಬರುವ ಬಸ್‌ಗಳು - ಹದಡಿ ರಸ್ತೆಯಲ್ಲಿರುವ ಶ್ರೀ ಮಾಗನೂರು ಬಸಪ್ಪ ಮೈದಾನದಲ್ಲಿ ನಿಲುಗಡೆ ಮಾಡಿಕೊಂಡು ನಿರ್ಗಮಿಸುವುದು. ಜಗಳೂರು ಕಡೆಯಿಂದ ಬರುವ ಬಸ್‌ಗಳು- ಕೆ.ಆರ್.ರಸ್ತೆ ಗಣೇಶಗುಡಿ ಪಕ್ಕದಲ್ಲಿರುವ ಜಗಳೂರು ಬಸ್ ನಿಲ್ದಾಣದಲ್ಲಿ ನಿಲುಗಡೆ ಮಾಡಿಕೊಂಡು ನಂತರ ಆರ್‌ಎಂಸಿ ಯಾರ್ಡ್ ರಸ್ತೆ ಮೂಲಕ ಪ್ಲೈ ಓವರ್ ಹತ್ತಿರ ಬಂದು ವಾಪಾಸ್ ಅದೇ ಮಾರ್ಗವಾಗಿ ಹೋಗುವುದು. ಚಿತ್ರದುರ್ಗ ಮತ್ತು ಸಂತೇಬೆನ್ನೂರು ಬೀರೂರು ಸಮ್ಮಸಗಿ ರಸ್ತೆಯಿಂದ ಬರುವ ಬಸ್‌ಗಳನ್ನು ದಾವಣಗೆರೆ ನಗರದ ನಿರ್ಮಾಣ ಹಂತದಲ್ಲಿರುವ ಹೊಸ ಕೆಎಸ್‌ಆರ್‌ಟಿಬಸ್ ನಿಲ್ದಾಣಕ್ಕೆ ಬಂದು ವಾಪಾಸ್ ಬಾಡ ಕ್ರಾಸ್ ನ ರಸ್ತೆ ಮೂಲಕ ಹರಿಹರ, ಹಾವೇರಿ ಕಡೆಗೆ ಹೋಗುವುದು, ಹರಿಹರ ಮತ್ತು ಶಾಮನೂರು ಕಡೆಯಿಂದ ಬರುವ ವಾಹನಗಳನ್ನು ದಾವಣಗೆರೆ ನಗರದ ಎಸಿಬಿ ಕಛೇರಿ ಎದುರುಗಡೆ ರಿಂಗ್ ರಸ್ತೆಯಲ್ಲಿರುವ ಎರಡು ಖಾಲಿ ಜಾಗದಲ್ಲಿ ನಿಲುಗಡೆ ಮಾಡಿಕೊಂಡು ನಿರ್ಗಮಿಸಬೇಕೆಂದು ತಿಳಿಸಲಾಗಿದೆ.

### ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣಕ್ಕೆ ಶಂಕುಸ್ಥಾಪನೆ

» ದಾವಣಗೆರೆ

ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್ ಮಲ್ಲಿಕಾರ್ಜುನ್ ಅವರ ಅಧ್ಯಕ್ಷತೆಯಲ್ಲಿ ಅ.14 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಕುಂದುವಾಡ ರಸ್ತೆಯ ಸಪ್ತಗಿರಿ ಶಾಲೆ ಹಿಂಭಾಗದಲ್ಲಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯದ ಕಟ್ಟಡ ನಿರ್ಮಾಮಿಸಲು ಶಂಕುಸ್ಥಾಪನಾ ಕಾರ್ಯಕ್ರಮವನ್ನು ನಡೆಯಲಿದೆ ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಗಾಯಿತ್ರಿ ಕೆ.ಹೆಚ್ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

66/11 ಕೆ.ವಿ. ದಾವಣಗೆರೆ ವಿದ್ಯುತ್ ವಿತರಣಾ ಕೇಂದ್ರದಿಂದ ಹೊರಡುವ ಫೀಡರ್‌ನಲ್ಲಿ 24*7 ಜಲಸಿರಿ ಯೋಜನೆಯಡಿಯಲ್ಲಿ ನಿರಂತರ ಶುದ್ಧಕುಡಿಯುವ ನೀರಿನ ಸರಬರಾಜು ಯೋಜನೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಅ.12 ರಂದು ಬೆಳಿಗ್ಗೆ 10-00 ರಿಂದ ಮಧ್ಯಾಹ್ನ 04-00ರವರೆಗೆ ಎಫ್-10 ಸಿ.ಜಿ.ಹೆಚ್ ಫೀಡರ್ ವ್ಯಾಪ್ತಿಯ ಪೋಲಿಸ್ ಕೊಟ್ರಸ್,ಮುದಳ್ಳಿ ತೋಟ, ಪೋಲಿಸ್ ಕೊಟ್ರಸ್ ಎಮ್.ಎಸ್ ಬಿಲ್ಡಿಂಗ್, ಪೋಲಿಸ್ ಡಿ.ಎ.ಆರ್ ಆಫೀಸ್, ಜೊಲ್ಲಿ ಕಾಂಪೌಂಡ್,ವಿನೋಬ ನಗರ, 1ನೇ ಮೇನ್ ಚರ್ಚರಸ್ತೆ, ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

### ಆಯ್ಕೆ ಪಟ್ಟಿ ಪ್ರಕಟ

■ ಚಿಕ್ಕಮಗಳೂರು

ಮೂಡಿಗೆರೆ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನೆ ಯಡಿ ಅಂಗನವಾಡಿ ಕಾರ್ಯಕರ್ತೆ / ಸಹಾಯಕಿಯರ ಖಾಲಿ ಹುದ್ದೆಗಳಿಗೆ ಶಿಶು ಅಭಿವೃದ್ಧಿ ಯೋಜನಾಧಿ ಕಾರಿಗಳ ಕಛೇರಿ ಮೂಡಿಗೆರೆ ಇಲ್ಲಿ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟಿಸಲಾಗಿದೆ. ಆಕ್ಷೇಪಣೆಯನ್ನು ಸಲ್ಲಿಸಲು ಅಕ್ಟೋಬರ್ 17 ರವರೆಗೆ ಅವಕಾಶವಿದ್ದು, ಆಕ್ಷೇಪಣೆಯನ್ನು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಮೂಡಿಗೆರೆ ಸಲ್ಲಿಸಬಹುದಾಗಿದೆ.

## ಪಿ.ಎಂ. ವಿಶ್ವಕರ್ಮ ಯೋಜನೆ

# ವಾರದಲ್ಲಿ 10 ಸಾವಿರ ನೋಂದಣಿ ಗುರಿ

### ಸೇವಾ ಕೇಂದ್ರದಲ್ಲಿ ನೋಂದಣಿಗೆ ಹಣ ಪಡೆದರೆ ಕಠಿಣ ಕ್ರಮ- ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ.

» ಚಿತ್ರದುರ್ಗ



ವಿವಿಧ ವೃತ್ತಿ ಆಧಾರಿತ ಕುಶಲಕರ್ಮಿಗಳಿಗೆ ಆರ್ಥಿಕನೆರವುನೀಡಲುಜಾರಿಗೊಂಡಿರುವ ಪಿ.ಎಂ. ವಿಶ್ವಕರ್ಮ ಯೋಜನೆಯಡಿ ಜಿಲ್ಲೆಯಾದ್ಯಂತ ವಾರದಲ್ಲಿ ಕನಿಷ್ಠ 10 ಸಾವಿರ ಫಲಾನುಭವಿಗಳನ್ನು ನೊಂದಣಿ ಮಾಡಿಸಬೇಕು, ಸಾಮಾನ್ಯ ಸೇವಾ ಕೇಂದ್ರದಲ್ಲಿ ಅರ್ಜಿ ನೋಂದಣಿ ಉಚಿತವಾಗಿದ್ದು, ಇದಕ್ಕಾಗಿ ಸೇವಾ ಕೇಂದ್ರಗಳಲ್ಲಿ ಹಣ ಪಡೆದರೆ ಅಂತಹವರ ವಿರುದ್ಧ ಕಠಿಣ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಹೇಳಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜರುಗಿದ ಪಿ.ಎಂ. ವಿಶ್ವಕರ್ಮ ಯೋಜನೆಯ ಕುರಿತ ಜಿಲ್ಲಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿವಿಧ ವೃತ್ತಿ ಆಧಾರಿತ ಕುಶಲಕರ್ಮಿಗಳು, ಅಸಂಘಟಿತ ಕಾರ್ಮಿಕ ವರ್ಗದವರೂ ಸೇರಿದಂತೆ ನಾನಾ ವೃತ್ತಿಗಳಲ್ಲಿ ತೊಡಗಿರುವ ಶ್ರಮಿಕ ವರ್ಗದವರಿಗೆ ಪಿ.ಎಂ.ವಿಶ್ವಕರ್ಮ ಯೋಜನೆಯಡಿ ಬಡಗಿ, ದೋಣಿ ತಯಾರಿಕೆ, ಶಸ್ತ್ರ ತಯಾರಿಕೆ, ಕಮ್ಮಾರಿಕೆ, ಕಲ್ಲುಕುಟಿಗ, ಬಟ್ಟೆ, ಚಾಪೆ-ಕಸಪರಕೆ ತಯಾರಕರು, ಗೊಂಬೆ ಮತ್ತು ಆಟಿಕೆ ತಯಾರಿಕೆ, ಕ್ಷೌರಿಕ ವೃತ್ತಿ, ಸುತ್ತಿಗೆ ಮತ್ತು ಉಪಕರಣಗಳ ತಯಾರಿಕೆ, ಹೂಮಾಲೆ ತಯಾರಿಕೆ, ಅಗಸರು (ದೋಬಿ) ಆಭರಣ ತಯಾರಿಕೆ, ಟೈಲರಿಂಗ್, ಕುಂಬಾರಿಕೆ, ಮೀನು ಬಲೆ ಹೆಣೆಯುವವರು, ಮೂರ್ತಿ ಮತ್ತು ಕಲ್ಲಿನ ಕೆತ್ತನೆ ಮಾಡುವ ಶಿಲ್ಪಿಗಳು, ಚಮ್ಮಾರರು, ಪಾದರಕ್ಷೆ ತಯಾರಕರು, ಬೀಗ ತಯಾರಿಕೆ ಸೇರಿದಂತೆ ವಿವಿಧ ಬಗೆಯ ವೃತ್ತಿ ಮಾಡುವವರು, ತಮ್ಮ ವೃತ್ತಿ ಸುಧಾರಣೆಗೆ ಅಗತ್ಯವಿರುವ ಉಪಕರಣಗಳನ್ನು ಖರೀದಿಸಲು ಬಡತನ ಅಡ್ಡಿಯಾಗಿರುತ್ತದೆ, ಇಂತಹವರೆಲ್ಲರಿಗೂ ಆರ್ಥಿಕ ಸಹಾಯ ನೀಡುವ ಸಲುವಾಗಿ ಸರ್ಕಾರದಿಂದ ಪಿ.ಎಂ. ವಿಶ್ವಕರ್ಮ ಯೋಜನೆ ಜಾರಿಗೊಳಿಸಲಾಗಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರು ಹೆಚ್ಚಿರುವ ಹಾಗೂ ಆರ್ಥಿಕವಾಗಿ ಹಿಂದುಳಿದವರು ಹೆಚ್ಚಿನ ಸಂಖ್ಯೆಯಲ್ಲಿರುವ ಚಿತ್ರದುರ್ಗ ಜಿಲ್ಲೆಗೆ ಈ ಯೋಜನೆ ನಿಜಕ್ಕೂ ಅತ್ಯಂತ ಸಹಕಾರಿಯಾಗಿದೆ. ವಿಶೇಷವೆಂದರೆ ಸರ್ಕಾರದಿಂದ ಫಲಾನುಭವಿಗಳ ಆಯ್ಕೆಗೆ ಯಾವುದೇ ಗುರಿ ನಿಗದಿ ಮಾಡಿಲ್ಲ ಹಾಗೂ ಬಿಪಿಎಲ್ ಅಥವಾ ಎಪಿಎಲ್ ಕಾರ್ಡ್ ಬೇಕು ಎನ್ನುವ ಯಾವುದೇ ಮಾನದಂಡ ಇಲ್ಲ. ಹೆಚ್ಚು ಹೆಚ್ಚು ಜನರು ಯೋಜನೆಗೆ ನೊಂದಣಿ ಮಾಡಿಕೊಳ್ಳುವ ಮೂಲಕ ಇದರ ಲಾಭ ಪಡೆದುಕೊಳ್ಳುವಂತೆ ಆಗಬೇಕು ಎಂದರು.

ಸೇವಾ ಕೇಂದ್ರಗಳ ಕುಂಟುನೆಪಕ್ಕೆ ಅಸಮಾಧಾನ : ಕಳೆದ ಸೆಪ್ಟೆಂಬರ್ 17 ರಿಂದಲೇ ಪಿ.ಎಂ.ವಿಶ್ವಕರ್ಮ ಯೋಜನೆಗಾಗಿ ನೊಂದಣಿ ಪ್ರಕ್ರಿಯೆ ಪ್ರಾರಂಭವಾಗಿದೆ. ರಾಜ್ಯದಲ್ಲಿ ಚಿತ್ರದುರ್ಗ ಜಿಲ್ಲೆ ಅರ್ಜಿ ಸಲ್ಲಿಕೆ ವಿಷಯದಲ್ಲಿ ತುಂಬಾ ಹಿಂದುಳಿದಿರುವ ಬಗ್ಗೆ ಮಾಹಿತಿ ಪಡೆದ ಜಿಲ್ಲಾಧಿಕಾರಿಗಳು ಈ ಕುರಿತು ತೀವ್ರ ಅಸಮಾಧಾನ ವ್ಯಕ್ತಪಡಿಸಿ, ಸಮಜಾಯಿಷಿ ನೀಡುವಂತೆ ಸಾಮಾನ್ಯ ಸೇವಾ ಕೇಂದ್ರದ ಜಿಲ್ಲಾ ನೋಡಲ್ ಅಧಿಕಾರಿಯನ್ನು ಸಭೆಯಲ್ಲಿ ಪ್ರಶ್ನಿಸಿದರು. ನೊಂದಣಿಗೆ ಸರ್ವರ್, ಇಂಟರ್‌ನೆಟ್ ಹಾಗೂ ವಿದ್ಯುತ್ ತೊಂದರೆ ಇರುವುದಾಗಿ ನೋಡಲ್ ಅಧಿಕಾರಿ ಉತ್ತರಿಸಿದರು, ಇದರಿಂದ ಕುಪಿತಗೊಂಡ ಜಿಲ್ಲಾಧಿಕಾರಿಗಳು, ಬೇರೆ ಜಿಲ್ಲೆಗಳಲ್ಲಿ ಇಲ್ಲದ ಸರ್ವರ್ ಸಮಸ್ಯೆ ನಮ್ಮಲ್ಲಿ ಏಕೆ? ವಿದ್ಯುತ್ ಸರಬರಜಿನಲ್ಲೂ ಅಡಚಣೆ ಇಲ್ಲ. ನಿಮ್ಮ ಇಚ್ಛಾಶಕ್ತಿ ಕೊರತೆಯಿಂದ ಅರ್ಜಿ ಸಲ್ಲಿಕೆಯಲ್ಲಿ ಹಿಂದುಳಿದಿದ್ದೇವೆ, ಇಲ್ಲಸಲ್ಲದ ಸಬೂಬು ಹೇಳಿ ನಿರ್ಲಕ್ಷ್ಯ ತೋರುವುದನ್ನು ಸಹಿಸುವುದಿಲ್ಲ ಎಂದರು.

ಸಾಮಾನ್ಯ ಸೇವಾ ಕೇಂದ್ರದಲ್ಲಿ ಫಲಾನುಭವಿಗಳ ನೊಂದಣಿಗೆ 50 ರಿಂದ 100 ರೂ. ಹಣ ಪಡೆಯುತ್ತಿರುವುದಾಗಿ ವಿವಿಧ ಸಮಾಜದ ಹಾಗೂ ಸಂಘ ಸಂಸ್ಥೆಗಳ ಮುಖಂಡರು ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು, ಸಾಮಾನ್ಯ ಸೇವಾ ಕೇಂದ್ರದವರಿಗೆ ಪ್ರತಿ ಫಲಾನುಭವಿಯ ನೊಂದಣಿಗೆ 80 ರೂ. ಮೊತ್ತವನ್ನು ಸರ್ಕಾರ ನೀಡುತ್ತದೆ, ಆದರೂ ಸಾರ್ವಜನಿಕರಿಂದ ಹಣ ಪಡೆಯುದು ಅಪರಾಧವಾಗಿದೆ. ಹಣ ಪಡೆದವರ ಮೇಲೆ ಎಫ್.ಐ.ಆರ್ ದಾಖಲಿಸಿ, ಪಡೆದ ಹಣ ಹಿಂದಿರುಗಿಸಬೇಕು. ಮುಂದೆ ಇಂತಹ ಘಟನೆಗಳು ನಡೆದರೆ, ಸಾಮಾನ್ಯ ಸೇವಾ ಕೇಂದ್ರಗಳನ್ನು ಕಪ್ಪು ಪಟ್ಟಿಗೆ ಸೇರಿಸಿ, ಜಿಲ್ಲೆಯಲ್ಲಿಕಾರ್ಯನಿರ್ವಹಿಸಲುಅವಕಾಶ ನೀಡದಂತೆ ಸರ್ಕಾರಕ್ಕೆ ಖುದ್ದು ಶಿಫಾರಸ್ಸು ಮಾಡುವುದಾಗಿ ಎಚ್ಚರಿಸಿದರು.

ನೊಂದಣಿ ವಿಧಾನ ಸರಳ: ಯೋಜನೆ ಕುರಿತು ಮಾಹಿತಿ ನೀಡಿದ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ. ಆನಂದ್ ಅವರು, ಪಿ.ಎಂ. ವಿಶ್ವಕರ್ಮ ಯೋಜನೆಯ ಲಾಭ ಪಡೆಯಲು ಕುಶಲಕರ್ಮಿಗಳು ൃಣಣಠಿ://ಠಿಟಾಘುತಿಚಿಞಚಿಡಿಟಚಿ.ರಠತ.ಟಿ ವೆಬ್‌ಸೈಟ್ ಮೂಲಕ ಅಥವಾ ಸ್ಥಳೀಯ ಸಾಮಾನ್ಯ ಸೇವಾ ಕೇಂದ್ರಗಳ ಮೂಲಕ ನೋಂದಾಯಿಸಿಕೊಳ್ಳಬಹುದು. ಅರ್ಜಿ ಸಲ್ಲಿಕೆಗೆ ಆಧಾರ್ ಕಾರ್ಡ್, ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಪಾಸ್ ಬುಕ್‌ಹಾಗೂಮೊಬೈಲ್‌ಸಂಖ್ಯೆಇದಿಷ್ಟಿದ್ದರೆ ಸಾಕು, ನೊಂದಣಿ ಮಾಡಿಕೊಳ್ಳಲು. ನೋಂದಣಿ ನಂತರದ ಹಂತದಲ್ಲಿ ಅರ್ಜಿ ಸಲ್ಲಿಸಿದವರ ವೃತ್ತಿ ಕುರಿತಾಗಿ ಆಯಾ ಗ್ರಾಮ ಪಂಚಾಯತಿ ಹಾಗೂ ನಗರ ಸ್ಥಳೀಯ ಸಂಸ್ಥೆಗಳ ಅಧಿಕಾರಿಗಳು ವೆಬ್‌ಪೋರ್ಟಲ್‌ನಲ್ಲಿ ದೃಢೀಕರಣ ನೀಡುವರು. ಈ ಎಲ್ಲಾ ಪ್ರಕ್ರಿಯೆಗಳು ಆನ್ ಲೈನ್ ಮೂಲಕ ನಡೆಯಲಿವೆ. ಗ್ರಾಮ ಪಂಚಾಯತಿ ಅಧ್ಯಕ್ಷರ ಲಾಗಿನ್ ಐಡಿ ಸೃಜನೆ ಮಾಡಲಾಗಿದ್ದು, ತರಬೇತಿ ನೀಡಲಾಗುವುದು. ಈಗಾಗಲೆ ಕಾರ್ಮಿಕ ಇಲಾಖೆಯ ಇ-ಶ್ರಮ ಪೋರ್ಟಲ್‌ನಲ್ಲಿ ಲಭ್ಯವಿರುವ ಜಿಲ್ಲೆಯ 18,923 ಜನರನ್ನು ಯೋಜನೆಯಡಿ ನೊಂದಣಿಗೆ ಕ್ರಮ ವಹಿಸಲಾಗಿದೆ ಎಂದರು.

ಕೌಶಲ್ಯ ತರಬೇತಿ, ರಿಯಾಯಿತಿ ದರದಲ್ಲಿ ಸಾಲ ಸೌಲಭ್ಯ: ಯೋಜನೆಯಡಿ ನೊಂದಣಿ ಮಾಡಿಕೊಂಡವರಿಗೆ ಪಿ.ಎಂ. ವಿಶ್ವಕರ್ಮ ಪ್ರಮಾಣ ಪತ್ರ ಮತ್ತು ಐಡಿ ಕಾರ್ಡ್ ನೀಡಲಾಗುವುದು. ತರಬೇತಿ ಬಯಸುವವರಿಗೆ ಮೊದಲ ಹಂತದಲ್ಲಿ 5 ದಿನಗಳ ಕೌಶಲ್ಯ ತರಬೇತಿ ನೀಡಲಾಗುವುದು. ತರಬೇತಿ ಅವಧಿಯಲ್ಲಿ ಪ್ರತಿದಿನ 500 ರೂ. ಭತ್ಯೆ ನೀಡಲಾಗುವುದು. ಅಲ್ಲದೆ 15 ಸಾವಿರ ರೂ.ಗಳನ್ನು ಸುಧಾರಿತ ಉಪಕರಣಗಳ ಖರೀದಿಗೆ ನೇರವಾಗಿ ಫಲಾನುಭವಿಗಳ ಖಾತೆಗೆ ಜಮೆ ಮಾಡಲಾಗುವುದು. ಬಳಿಕ ಮೊದಲ ವರ್ಷದಲ್ಲಿ ಬ್ಯಾಂಕುಗಳ ಮೂಲಕ ಶೇ.5 ರ ಬಡ್ಡಿ ದರದಲ್ಲಿ ರೂ.01 ಲಕ್ಷದವರೆಗೆ ಸಾಲ ಸೌಲಭ್ಯ ನೀಡಲಾಗುವುದು. ಎರಡನೇ ಹಂತದಲ್ಲಿ ರೂ.2 ಲಕ್ಷದ ವರೆಗೆ ಸಾಲ ನೀಡಲಾಗುವುದು. ಇದರೊಂದಿಗೆ ಡಿಜಿಟಲ್ ವಹಿವಾಹಟು ಮಾರುಕಟ್ಟೆ ವಿಸ್ತರಣೆಗೆ ಬೆಂಬಲ ಹಾಗೂ ಪ್ರೋತ್ಸಾಹ ನೀಡಲಾಗುವುದು. ಈ ಮೂಲಕ ಅಸಂಘಟಿತ ಕುಶಲಕರ್ಮಿಗಳನ್ನು ಸಂಘಟಿತ ವಲಯಕ್ಕೆ ತರುವುದು ಯೋಜನೆಯ ಉದ್ದೇಶವಾಗಿದೆ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

400 ಕಂಪ್ಯೂಟರ್ ಆಪರೇಟರ್‌ಗಳ ನೇಮಕ: ಜಿಲ್ಲೆಯಲ್ಲಿ 400 ಸಾಮಾನ್ಯ ಸೇವಾ ಕೇಂದ್ರಗಳು ಇವೆ. ಇದರಲ್ಲಿ 800 ಕಂಪ್ಯೂಟರ್ ಆಪರೇಟರ್‌ಗಳು ಕಾರ್ಯನಿರ್ವಹಿಸುತ್ತಿದ್ದಾರೆ. ಈ ಪೈಕಿ 400 ಕಂಪ್ಯೂಟರ್ ಆಪರೇಟರ್‌ಗಳನ್ನು ಪಿ.ಎಂ. ವಿಶ್ವಕರ್ಮ ಅರ್ಜಿ ನೊಂದಣಿ ಕಾರ್ಯಕ್ಕೆ ನಿಯೋಜಿಸಬೇಕು. ಇವರಿಗೆ ಪ್ರತಿನಿತ್ಯದ ಗುರಿ ನೀಡಿ ಕೆಲಸ ನೊಂದಣಿ ಕಾರ್ಯ ಪೂರ್ಣಗೊಳಿಸಬೇಕು. ವಿಶ್ವಕರ್ಮ ಸಮಾಜ, ಸವಿತಾ ಸಮಾಜ, ಕಟ್ಟಡ ಕಾರ್ಮಿಕರ ಸಂಘದವರು ಬಯಸಿದಲ್ಲಿ, ಒಂದೇ ಸ್ಥಳದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ನೊಂದಣಿಗೆ ಪ್ರತ್ಯೇಕ ವ್ಯವಸ್ಥೆ ಮಾಡಿಕೊಡಬೇಕು, ಸೂಕ್ತ ರೀತಿಯಲ್ಲಿ ಯೋಜನೆ ರೂಪಿಸಿ, ಕುಶಲಕರ್ಮಿಗಳನ್ನು ಸಂಘ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯತಿ ಮೂಲಕ ಒಂದಡೆ ಕರೆ ತಂದು ಹೆಚ್ಚಿನ ಸಂಖ್ಯೆಯಲ್ಲಿ ನೋಂದಣಿ ಮಾಡಿಸುವಂತೆಮಾಡಬೇಕು.ಅಧಿಕಾರಿಗಳ ಸಮನ್ವಯಕ್ಕಾಗಿ ವಾಟ್ಸಪ್ ಗ್ರೂಪ್ ರಚನೆ ಮಾಡಿ. ಪ್ರತಿನಿತ್ಯದ ನೋಂದಣಿ ಬಗ್ಗೆ ವರದಿ ನೀಡುವಂತೆ ದಿವ್ಯಪ್ರಭು.ಜಿ.ಆರ್.ಜೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವ್ಯಾಪಕ ಪ್ರಚಾರಕ್ಕೆ ಸೂಚನೆ : ಪಿ.ಎಂ.ವಿಶ್ವಕರ್ಮ ಯೋಜನೆಯ ಬಗ್ಗೆ ಗ್ರಾಮಾಂತರ ಪ್ರದೇಶದಲ್ಲಿ ಪಂಚಾಯತಿಗಳಿಂದ ಹೆಚ್ಚಿನ ಪ್ರಚಾರ ನೀಡಬೇಕು. ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯ ಮಹಿಳೆಯರು ಟೈಲರಿಂಗ್ ವೃತ್ತಿಯಲ್ಲಿ ತೊಡಗಿದ್ದಾರೆ. ಮಹಿಳಾ ಸ್ವಸಹಾಯ ಗುಂಪುಗಳಲ್ಲಿ ಕೂಡ ಮಹಿಳೆಯರು ಟೈಲರಿಂಗ್ ಮಾಡುವವರಿದ್ದಾರೆ, ಇವರೆಲ್ಲರು ಅರ್ಜಿ ಸಲ್ಲಿಸುವಂತೆ ಆಗಬೇಕು. ಯೋಜನೆಗೆ ಸಂಬಂಧಪಟ್ಟಂತೆ ಕುಶಲಕರ್ಮಿ ಸಂಘ-ಸಂಸ್ಥೆಗಳ ಪದಾಧಿಕಾರಿಗಳಿಗೆ ಜಾಗೃತಿ ಮೂಡಿಸಬೇಕು. ಅಕ್ಕಸಾಲಿಗರು, ಕ್ಷೌರಿಕರು, ಬಡಗಿ, ಕಮ್ಮಾರಿಕೆ, ಕಲ್ಲುಕುಟಿಕ, ಪಾದರಕ್ಷೆ, ಚಾಪೆ, ಕಸಬರಿಕೆ ತಯಾರಿಕೆ, ಟೈಲರಿಂಗ್ ಮಾಡುವವರು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸುವಂತೆ ಮಾಡಬೇಕು ಎಂದು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು.ಜಿ.ಆರ್.ಜೆ ಸೂಚನೆ ನೀಡಿದರು.

ಜಿ.ಪಂ.ಸಿಇಓಎಸ್.ಜೆ.ಸೋಮಶೇಖರ್ ಅವರು ಮಾತನಾಡಿ, ಸಾಮಾನ್ಯ ಸೇವಾ ಕೇಂದ್ರದವರು, ಗ್ರಾಮಗಳಲ್ಲಿ ಸರ್ವರ್ ಅಥವಾ ಇಂಟರ್‌ನೆಟ್ ಸಮಸ್ಯೆ ಇದೆ ಎಂಬುದಾಗಿ ಸುಳ್ಳು ಹೇಳಿ, ಜನರನ್ನು ಅಥವಾ ಅಧಿಕಾರಿಗಳನ್ನು ತಪ್ಪುದಾರಿಗೆ ಎಳೆಯಬೇಡಿ, ಸರ್ಕಾರದ ಯೋಜನೆಗಳನ್ನು ಹೆಚ್ಚು ಹೆಚ್ಚು ಜನರಿಗೆ ತಲುಪಿಸಲು ಆದಷ್ಟು ಹೆಚ್ಚಿನ ಪ್ರಯತ್ನ ಮಾಡಬೇಕು ಎಂದರು.

ಸಭೆಯಲ್ಲಿ ಜಿ.ಪಂ. ಸಿಇಒ ಎಸ್.ಜೆ. ಸೋಮಶೇಖರ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿನಿರ್ದೇಶಕ ಬಿ. ಆನಂದ್ ಸೇರಿದಂತೆ ಜಿಲ್ಲೆಯ ಎಲ್ಲಾ ತಾ.ಪಂ. ಗಳ ಇಓಗಳು, ನಗರ ಸ್ಥಳೀಯ ಸಂಸ್ಥೆಗಳ ಮುಖ್ಯಾಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಸವಿತಾ ಸಮಾಜ, ವಿಶ್ವಕರ್ಮ ಸಮಾಜ, ಕಟ್ಟಡ ಕಾರ್ಮಿಕರ ಸಂಘ ಸೇರಿದಂತೆ ವಿವಿಧ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಇದ್ದರು.

### ಸರ್ವಧರ್ಮೀಯರ ವಧು-ವರರ ಸಮಾವೇಶ

» ಚಿತ್ರದುರ್ಗ

ಮಾನವನ ಬದುಕಿನಲ್ಲಿ ಮದುವೆ ಎಂಬುದು ಮಹತ್ತರವಾದ ಘಟ್ಟ .ಈ ಮದುವೆಯ ಮಹತ್ತರ ಘಟ್ಟವನ್ನು 12ನೇ ಶತಮಾನದ ಶರಣರು "ಕಲ್ಯಾಣ"ವೆಂದು ಕರೆದಿದ್ದಾರೆ. ನಮ್ಮ ಪುರಾತನ ಪರಂಪರೆಯು ಸಪ್ತಪದಿ ಎಂಬುದಾಗಿ ಕರೆದಿದೆ. "ಸಾವಿರ ಸಕಾರಾತ್ಮಕ ಸುಳ್ಳು ಹೇಳಿ ಒಂದು ಮದುವೆ ಮಾಡು" ಎಂಬ ಗಾದೆ ಮಾತು ಇರುವಂತೆ ಸತತವಾಗಿ ಮೂರು ದಶಕಗಳಿಂದ ಮುನ್ನಡೆಸಿಕೊಂಡು ಬರುತ್ತಿರುವ ಶ್ರೀ ಬಸವೇಶ್ವರ ವಧು-ವರರ ಮಾಹಿತಿ ಕೇಂದ್ರದ ವ್ಯವಸ್ಥಾಪಕರಾಗಿ ಕಾರ್ಯ ನಿರ್ವಹಿಸುತ್ತಿರುವ ಜೆ.ಎಂ. ಜಂಬಯ್ಯ ಸೇವೆ ಶ್ಲಾಘನೀಯ. ಅದರಂತೆ ಇದೀಗ ಇದೇ ತಿಂಗಳ ಭಾನುವಾರ 2023ರ ಅಕ್ಟೋಬರ್ 15 ರಂದು ಚಿತ್ರದುರ್ಗ ನಗರದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಬೆಳಗ್ಗೆ 11 ಗಂಟೆಗೆ ಸರ್ವಧರ್ಮೀಯರ ರಾಜ್ಯ ಮಟ್ಟದ ವಧು-ವರ ಸಮಾವೇಶವನ್ನು ಏರ್ಪಡಿಸಲಾಗಿದೆ.



**ತುರುವನೂರು ಹೋಬಳಿಯ ಬೆಳಗಟ್ಟ ಗ್ರಾಮ ಪಂಚಾಯಿತಿಯ ಹಾಯ್ಕಲ್ ಗ್ರಾಮದ ಪರಿಶಿಷ್ಟ ಜಾತಿ ಫಲಾನುಭವಿಗಳಾದ ದುರುಗಮ್ಮ ಕೋಂ ರಾಮಪ್ಪ, ರಾಧಮ್ಮ ಕೋಂ ಜಗಧೀಶ, ಮೇಘಾ ಕೋಂ ರಮೇಶ್, ಪ್ರಧಾನ ಮಂತ್ರಿ ಅವಾಜ್ ಯೋಜನೆಯಲ್ಲಿ ಬಂದ ಗೃಹ ಸಂಯೋಜಿತ ಪತ್ರವನ್ನು ವಿತರಣೆ ಮಾಡಿದರು.ಹಾಯ್ಕಲ್ ಗ್ರಾಮದ ದಲಿತ ಕಾಲೋನಿಯ ಗ್ರಾಮ ಪಂಚಾಯಿತಿ ಸದಸ್ಯ ಮಂಜಣ್ಣ.ಜೆ ರವರು ಇದ್ದರು.**

## ಪ್ರಮುಖ ಸುದ್ದಿ

# ಭ್ರಷ್ಟಾಚಾರ ಮುಕ್ತ ಭಾರತಕ್ಕೆ ಎಲ್ಲಾರೂ ಕೈ ಜೋಡಿಸಿ

» ದಾವಣಗೆರೆ




ಸಾರ್ವಜನಿಕ ಆಡಳಿತದ ಎಲ್ಲಾ ಕ್ಷೇತ್ರಗಳಲ್ಲಿ ಭ್ರಷ್ಟಾಚಾರವನ್ನು ತೊಲಗಿಸಿ ಉತ್ತಮ ಆಡಳಿತಕ್ಕಾಗಿ ಪಾರದರ್ಶಕ ನೀತಿಗಳನ್ನು ರೂಪಿಸಿ ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಅಧ್ಯಕ್ಷರಾದ ರಾಜೇಶ್ವರಿ ಎನ್. ಹೆಗಡೆ ಅವರು ಅಭಿಪ್ರಾಯಪಟ್ಟರು.

ಬುಧವಾರ ಜಿಲ್ಲಾಡಳಿತ ಭವನದ ತುಂಗಭದ್ರ ಸಭಾಂಗಣದಲ್ಲಿ ದೇಶದ ಅಭಿವೃದ್ಧಿಗಾಗಿ, ಭ್ರಾಷ್ಟಚಾರ ಮುಕ್ತ ಭಾರತ ಎಂಬ ಘೋಷವಾಕ್ಯದೊಂದಿಗೆ ನಡೆದ ಭ್ರಷ್ಟಾಚಾರದ ವಿರುದ್ಧ ಜಾಗೃತಿ ಅರಿವು ಸಪ್ತಾಹ-2023 ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭ್ರಷ್ಟಾಚಾರವಿರುದ್ಧಜಾಗೃತಿಮೂಡಿಸಲು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯಕ್ರಮಗಳು ಹೆಚ್ಚು ನಡೆಯಬೇಕು. ಜಾಗೃತಿ ಅರಿವು ಸಪ್ತಾಹ ನಿರಂತರವಾಗಿ ನಡೆಯುವ ಕಾರ್ಯಕ್ರಮವಾಗಬೇಕು. ಭ್ರಷ್ಟಾಚಾರವನ್ನು ನಿರ್ಮೂಲನೆ ಮಾಡುವ ಹೊಣೆಗಾರಿಕೆ ಕೇವಲ ಇಲಾಖೆಯ ಕರ್ತವ್ಯವಲ್ಲ ಪ್ರತಿ ನಾಗರೀಕರು ಹಾಗೂ ಪ್ರಜ್ಞಾವಂತ ಸಮಾಜ ಜಾಗರೂಕತೆಯಿಂದ ಬದ್ಧರಾಗಿರಬೇಕು. ದೇಶದ ರಾಜಕೀಯ, ಸಾಮಾಜಿಕ, ಆರ್ಥಿಕ ಅಭಿವೃದ್ಧಿಗೆ ಎಲ್ಲರೂ ಪಾಲುದಾರರಗಿ ಒಟ್ಟಾಗಿ ಕಾರ್ಯನಿರ್ವಹಿಸಬೇಕು ಎಂದರು.

ಜಿಲ್ಲಾಧಿಕಾರಿ ಡಾ.ವೆಂಕಟೇಶ್. ಎಂ.ವಿ ಅವರು ಮಾತನಾಡಿ ಭ್ರಷ್ಟಾಚಾರ ಎಂಬುದು ಸಾಮಾಜಿಕ ಪಿಡುಗುಗಳಲ್ಲಿ ಒಂದಾಗಿದೆ. ಇದರಲ್ಲಿ ದೇಶದ ಆರ್ಥಿಕ್ಕ ಹಾಗೂ ಮೂಲಸೌಕರ್ಯಅಭಿವೃದ್ಧಿಯಲ್ಲಿ ಕುಂಠಿತವಾಗುತ್ತದೆ. ಇದಲ್ಲದೆ ಸಮಾಜದಲ್ಲಿ ಆಗಬೇಕಾಗಿರುವಂತಹ ಕಾರ್ಯಗಳ ಮೇಲೆ ದುಷ್ಪರಿಣಾಮ ಬೀರುತ್ತದೆ. ಬಡತನ ನಿವಾರಣೆಗೂ ಅಡಚಣೆ ಉಂಟಾಗುತ್ತಿದ್ದು, ಇದರಿಂದ ತಡೆಗಟ್ಟುವ ನಿಟ್ಟಿನಲ್ಲಿ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಕಾನೂನು ನಿಯಮಗಳಿಗೆ ಒಳಪಟ್ಟು ಕಾರ್ಯ ನಿರ್ವಹಿಸಬೇಕಾಗಿದೆ ಎಂದರು.ಭ್ರಷ್ಟಾಚಾರ ಎಂದರೆ ಕೇವಲ ಹಣವನ್ನು ಪಡೆಯುವುದು ಅಷ್ಟೇ ಅಲ್ಲದೇ, ಕಚೇರಿಯಲ್ಲಿನ ಯಾವುದೇ ಒಂದು ಕಡತವನ್ನು ಮಂಜೂರಾತಿ ಮಾಡದೇ ಕಾರ್ಯ ವಿಳಂಬ ಮಾಡಿದರೂ ಸಹ ಅದು ಭ್ರಷ್ಟಾಚಾರವೇ, ಇದನ್ನು ಅರ್ಥೈಸಿಕೊಂಡು ಪ್ರಜಾಪ್ರಭುತ್ವದ ಆತ್ಮವಾಗಿರುವ ಅಧಿಕಾರಿಗಳು ಉತ್ತಮ ರೀತಿಯಲ್ಲಿ ಕಾರ್ಯ ನಿರ್ವಹಿಸಿದಾಗ ಮಾತ್ರ ಉತ್ತಮ ಸಮಾಜ ಕಟ್ಟಲು ಸಾಧ್ಯ ಎಂದರು.

ಸರ್ಕಾರವು ಸಕಾಲ ಸೇವೆಯನ್ನು ಜಾರಿಗೆ ತಂದು, ಸಾರ್ವಜನಿಕರು ಕಛೇರಿಗಳಿಗೆ ಅಲೆದಾಡುವುದನ್ನು ತಪ್ಪಿಸುವ ನಿಟ್ಟಿನಲ್ಲಿ ಸಹಕಾರಿಯಾಗಿದ್ದು, 450ಕ್ಕೂ ಹೆಚ್ಚು ಸೇವೆಗಳನ್ನು ಸಕಾಲದಲ್ಲಿ ಒದಗಿಸಲಾಗುತ್ತಿದೆ ಎಂದರು.

ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ಭ್ರಷ್ಟಾಚಾರ ತಡೆ ಜಾಗೃತಿ ಸಪ್ತಾಹದ ಪ್ರತಿಜ್ಞಾ ವಿಧಿ ಬೋಧಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸುರೇಶ ಬಿ. ಇಟ್ನಾಳ್, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸದಸ್ಯ ಕಾರ್ಯದರ್ಶಿ ಮಹಾವೀರ ಮ, ಕರೆಣ್ಣವರ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣನಾಯ್ಕ್, ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಎಂ.ಎಸ್. ಕೌಲಾಪುರೆ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಅರುಣ್ ಕುಮಾರ್ ಎಲ್.ಹೆಚ್ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T